ಗುರುವಾರ 08.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 114
Digital Varthe Kannada Daily
Volume 01 - Issue 114
Thursday 08.01.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ
DIGITAL VARTHE
digitalvarthe@gmail.com
www.digitalvarthe.com

## ಲಕ್ಷ್ಮಿ ಹೆಬ್ಬಾಳ್ಕರ್ ಪುತ್ರನ ಕಾರು ಚಾಲಕನಿಗೆ ಚಾಕು ಇರಿತ ಕೇಸ್ - ನಾಲ್ವರು ಆರೋಪಿಗಳ ಬಂಧನ





ಬೆಳಗಾವಿಯಲ್ಲಿ ನಡೆದ ಗಂಭೀರ ಹತ್ಯೆ ಯತ್ನ ಪ್ರಕರಣಕ್ಕೆ ಸಂಬಂಧಿ ಸಿದಂತೆ ಪೊಲೀಸರು ವೇಗವಾಗಿ ಕಾರ್ಯಾಚರಣೆ ನಡೆಸಿ ನಾಲ್ವರು ಆರೋಪಿಗಳನ್ನು ಬಂಧಿಸಿರುವ ಘಟನೆ ನಗರದಲ್ಲಿ ಚರ್ಚೆಗೆ ಗ್ರಾಸವಾಗಿದೆ. ಈ ಪ್ರಕರಣವು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಪುತ್ರನ ಕಾರು ಚಾಲಕನ ಮೇಲೆ ನಡೆದಿರುವುದರಿಂದ ಹೆಚ್ಚಿನ ಗಮನ ಸೆಳೆದಿದೆ.

ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಪುತ್ರ ಮೃಣಾಲ್ ಹೆಬ್ಬಾಳ್ಕರ್ ಅವರ ಕಾರು ಚಾಲಕನಾಗಿದ್ದ ಬಸವಂತ ಕಡೋಲ್ಕರ್ ಮೇಲೆ ನಿನ್ನೆ ತೀವ್ರ ಹಲ್ಲೆ ನಡೆಸಿ ಹತ್ಯೆಗೈಯಲು ಯತ್ನಿಸಲಾಗಿತ್ತು. ಆರೋಪಿಗಳು ಚೂರಿಯಿಂದ ದಾಳಿ ನಡೆಸಿದ್ದು, ಬಸವಂತ ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಘಟನೆ ನಗರದ ಶಾಂತಿ ಸುವ್ಯವಸ್ಥೆ ಕುರಿತು ಆತಂಕ ಮೂಡಿಸಿದೆ.

ಘಟನೆಯ ಬಳಿಕ ಚಾಕು ಇರಿತಕ್ಕೆ ಒಳಗಾದ ಬಸವಂತನ ಸ್ನೇಹಿತ ಮದನ ಅವರು ಮದನ ಕ್ಯಾಂಪ್ ಪೊಲೀಸ್ ಠಾಣೆಗೆ ತೆರಳಿ ದೂರು ದಾಖಲಿಸಿದರು. ದೂರನ್ನು ಆಧರಿಸಿ ಪ್ರಕರಣ ದಾಖಲಿಸಿಕೊಂಡ ಪೊಲೀಸರು, ತಕ್ಷಣವೇ ತನಿಖೆಯನ್ನು ಚುರುಕುಗೊಳಿಸಿದರು. ಎಸಿಪಿ ಖಡೇಬಜಾರ್ ಶೇರಪ್ಪ ಅವರ ನೇತೃತ್ವದಲ್ಲಿ ವಿಶೇಷ ಪೊಲೀಸ್ ತಂಡ ರಚಿಸಲಾಗಿದ್ದು, ವಿವಿಧ ತಾಂತ್ರಿಕ ಸಾಕ್ಷ್ಯಗಳು ಹಾಗೂ ಸ್ಥಳೀಯ ಮಾಹಿತಿ ಆಧರಿಸಿ ಆರೋಪಿಗಳಿಗಾಗಿ ಶೋಧ ಕಾರ್ಯ ನಡೆಸಲಾಯಿತು.

ಪೊಲೀಸರ ನಿರಂತರ ಕಾರ್ಯಾಚರಣೆಯ ಫಲವಾಗಿ, ಘಟನೆ ನಡೆದ ಕೇವಲ 24 ಗಂಟೆಗಳ ಒಳಗೆ ಶಿವಯ್ಯ ಪೂಜಾರಿ, ನಿತೇಶ್ ಬಡಿಗೇರ, ಮೌನಪ್ಪ ಮತ್ತು ಸಂಪತ್ ಎಂಬ ನಾಲ್ವರು ಆರೋಪಿಗಳನ್ನು




ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಈ ತ್ವರಿತ ಕ್ರಮಕ್ಕೆ ಸಾರ್ವಜನಿಕ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ.

ಬಂಧಿತ ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ, ಹೆಚ್ಚಿನ ವಿಚಾರಣೆಗಾಗಿ ಪೊಲೀಸ್ ಕಸ್ಟಡಿಗೆ ಪಡೆಯಲಾಗುತ್ತದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಕುರಿತು ಪ್ರತಿಕ್ರಿಯಿಸಿದ ಬೆಳಗಾವಿ ಪೊಲೀಸ್ ಕಮಿಷನರ್ ಭೂಷಣ್ ಬೊರಸೆ, ಹಲ್ಲೆಗೆ ಒಳಗಾದ ಬಸವಂತ ಮತ್ತು ಆರೋಪಿಗಳು ಪರಸ್ಪರ ಸ್ನೇಹಿತರಾಗಿದ್ದರೆಂಬುದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ ಎಂದರು

## ಶಾಸಕ ಧೀರಜ್ ಮುನಿರಾಜ್ ವಿರುದ್ಧ ಕಾಂಗ್ರೆಸ್ ಕಾರ್ಯಕರ್ತರಿಂದ ದಿಕ್ಕಾರ ಘೋಷಣೆ



**ದೊಡ್ಡಬಳ್ಳಾಪು:** ನಗರ ಪೊಲೀಸ್ ಠಾಣೆ, ಡಿವೈಎಸ್ ಪಿ ಕಚೇರಿ ಮುಂಭಾಗ ನೇಕಾರ ಮಳಿಗೆ ಕಾಮಗಾರಿ ಶಂಕುಸ್ಥಾಪನೆಗೆ ಬುಧವಾರ ಶಾಸಕ ಧೀರಜ್ ಮುನಿರಾಜ್ ನೇತೃತ್ವದಲ್ಲಿ ನೇರವೇರಿಸಿದರು. ಮತ್ತೊಂದೆಡೆ ಶಿಷ್ಟಾಚಾರ ಪಾಲನೆ ಮಾಡದೇ ಕಾಂಗ್ರೆಸ್ ಜನಪ್ರತಿನಿಧಿಗಳಿಗೆ ನಮಗೆ ಆಹ್ವಾನವಿಲ್ಲವೆಂದು ಆರೋಪಿಸಿ ಮಾಜಿ ಶಾಸಕ ಟಿ.ವೆಂಕಟರಮಣಯ್ಯ ನೇತೃತ್ವದಲ್ಲಿ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಕಪ್ಪುಪಟ್ಟಿ ಧರಿಸಿ ಪ್ರತಿಭಟನೆ ನಡೆಸಿದರು. ಪ್ರತಿಭಟನಾ ನಿರತ ಕಾಂಗ್ರೆಸ್ ಕಾರ್ಯಕರ್ತರು ಶಾಸಕ ಧೀರಜ್ ಮುನಿರಾಜ್ ವಿರುದ್ಧ ದಿಕ್ಕಾರ ಕೂಗಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಮಾತನಾಡಿದ ಪೊಲೀಸರು ಮತ್ತು ಪ್ರತಿಭಟನಾ ನಿರತರ ನಡುವೆ ಮಾತಿನ ಚಕಮಕಿ ನಡೆಯಿತು. ಪ್ರತಿಭಟನಾ ನಿರತ ಕಾಂಗ್ರೆಸ್ ಮುಖಂಡರನ್ನು ಡಿವೈಎಸ್ಪಿ ಪಾಂಡುರಂಗ ಅವರು ಸಮಸ್ಯೆ ಕೇಳಿ ಮಾತನಾಡಿಸುವ ವೇಳೆ ಕೆಪಿಸಿಸಿ ಸದಸ್ಯ ಜಿ. ಲಕ್ಷ್ಮೀಪತಿ ಅವರು ಪ್ರಚೋದಾತ್ಮಕವಾಗಿ ಮಾತನಾಡಿರುವುದು ಕಂಡು ಬಂದಿದೆ. ಇವತ್ತು ಯಾವುದಾದರೂ ಪ್ರಾಣ ಹೋಗುತ್ತೆ, ಇಲ್ಲವಾದಲ್ಲಿ ಬಳ್ಳಾರಿ ಘಟನೆಗಿಂತ ಹೆಚ್ಚಾಗುತ್ತೆ ಎಂದು ಡಿವೈಎಸ್ಪಿ ಪಾಂಡುರಂಗ, ಮಾಜಿ ಶಾಸಕ ವೆಂಕಟರಮಣಯ್ಯ ಮುಂದೆಯೇ ಮಾತನಾಡಿದ್ದಾರೆ. ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಇಂತಹ ಪ್ರಚೋದನಾತ್ಮಕ ಮಾತುಗಳನ್ನಾಡಿರುವವರ ವಿರುದ್ಧ ಸಂಬಂಧಪಟ್ಟ ಇಲಾಖೆವರು ಕ್ರಮ ಜರುಗಿಸಬೇಕೆಂದು ಬಿಜೆಪಿ ನಾಯಕರು ಆಗ್ರಹಿಸಿದ್ದಾರೆ.

## ಕಳಲುಘಟ್ಟ ವಿಎಸ್‌ಎಸ್‌ಎನ್‌ಗೆ ಬಿ.ಕೆ. ಲಕ್ಷ್ಮೀಕಾಂತ್ ಅಧ್ಯಕ್ಷ, ಗೋವಿಂದರಾಜು ಉಪಾಧ್ಯಕ್ಷ



**ಕಳಲುಘಟ್ಟ:** ವಿಎಸ್‌ಎಸ್‌ಎನ್‌ಗೆ ಲಕ್ಷ್ಮೀಕಾಂತ ಅಧ್ಯಕ್ಷ


ತ್ಯಾಮಗೊಂಡ್ಲು ತ್ಯಾಮಗೊಡ್ಲು ಹೋಬಳಿಯ ಕಳಲುಘಟ್ಟ ವಿವಿಧೋದ್ದೇಶ ಗ್ರಾಮೀಣ ಕೃಷ ಸಹಕಾರಿ ಸಂಘದ ನೂತನ ಅಧ್ಯಕ್ಷರಾಗಿ ಬಿ.ಕೆ. ಲಕ್ಷ್ಮೀಕಾಂತ, ಉಪಾಧ್ಯಕ್ಷರಾಗಿ ಗೋವಿಂದರಾಜು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ನಾಗರಾಜು ಘೋಷಿಸಿದರು. ಸಂಘದ ಅಧ್ಯಕ್ಷ ಸ್ಥಾನಕ್ಕೆ ನಾಗರಾಜು ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ನರಸಿಂಹಮೂರ್ತಿ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಗಳಿಗೆ ಬುಧವಾರ ನಡೆದ ಚುನಾವಣೆ ಪ್ರಕ್ರಿಯೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಬಿ.ಕೆ.ಲಕ್ಷ್ಮೀಕಾಂತಗೂ ಉಪಾಧ್ಯಕ್ಷ ಸ್ಥಾನಕ್ಕೆ ಗೋವಿಂದರಾಜು ನಾಮಪತ್ರ ಸಲ್ಲಿಸಿದ್ದರು, ಉಳಿದ

ನಿರ್ದೇಶಕರುಗಳಲ್ಲಿ ಯಾರು ನಾಮಪತ್ರಗಳನ್ನು ಸಲ್ಲಿಸದ ಕಾರಣ 11

ನಿರ್ದೇಶಕರ ಬಲದೊಂದಿಗೆ ಅವಿರೋಧವಾಗಿ ಆಯ್ಕೆಯಾದರು. ನೂತನ ಅಧ್ಯಕ್ಷ ಬಿ.ಕೆ.ಲಕ್ಷ್ಮೀಕಾಂತ ಮಾತನಾಡಿ ಕಳಲುಘಟ್ಟ ಸಹಕಾರಿ ಸಂಘಕ್ಕೆ ಜೆಡಿಎಸ್ ಮುಖಂಡರಾದ ತಿಮ್ಮೇಗೌಡ ಅವರ ಮಾರ್ಗದರ್ಶನದಲ್ಲಿ ಎಲ್ಲ ಸದಸ್ಯರ ಸಹಕಾರದಿಂದ ಅವಿರೋಧವಾಗಿ ಆಯ್ಕೆಯಾಗಿದ್ದೇನೆ, ರೈತರ ಸೇವೆ ನಮ್ಮ ಕರ್ತವ್ಯವಾಗಿದೆ, ಸರಕಾರದಿಂದ ಬರುವ ಎಲ್ಲಾ ಸೌಲಭ್ಯಗಳನ್ನು ಅರ್ಹ ರೈತರಿಗೆ ತಲುಪಿಸುವ ಕಾರ್ಯವನ್ನು ಮಾಡುತ್ತೇನೆ, ಹಸಿರುವಳ್ಳಿ ಗ್ರಾಮದಲ್ಲಿ ನೂತನ ಕಟ್ಟಡದ ನಿರ್ಮಾಣವಾಗಿದೇ, ಸಂಘಕ್ಕೆ ಲಾಭ ತರುವ ಕಾರ್ಯವನ್ನು ಸದ್ಸಯರ ಸಹಕಾರದಿಂದ ಮುಮದುವರೆಸಿಕೊಮಡು ಹೋಗುತ್ತೇನೆ ಎಂದರು. ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಬಿ.ನಾಗರಾಜು ಮಾತನಾಡಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಸಂಘವೂ ಸಾಕಷ್ಟು ಲಾಭವನ್ನು ಕಂಡಿದೆ, ಸಂಘದ ಸದಸ್ಯರ

ಏಳಿಗೆಗೆ ಅಗತ್ಯ ಬ್ಯಾಂಕಿಗ್ ಸೌಲಭ್ಯಗಳನ್ನು ನಮ್ಮ ಸಂಘದಿಮದ ನೀಡಲಾಗುತ್ತಿದೆ, ಈ ಎಲ್ಲಾ ಸೌಲಭ್ಯಗಳನ್ನು ಹೆಚ್ಚಿನ ಸದಸ್ಯರು ಬಳಸಿಕೊಳ್ಳಬೇಕು, ಕೇಂದ್ರ ಬ್ಯಾಂಕ್‌ನಿದ ಬರುವ ಅನುದಾನಗಳು,ಸೌಲಭ್ಯಗಳನ್ನು ಹೆಚ್ಚಿಸು ಕೆಲಸವನ್ನು ಮಾಡುತ್ತೇನೆ ಎಂದರು. ಈ ಸಂದರ್ಭದಲ್ಲಿ ನೂತನ ಅಧ್ಯಕ್ಷ ಉಪಾಧ್ಯಕ್ಷರನ್ನು ಜೆಡಿಎಸ್ ಮುಖಂಡರಾದ ತಿಮ್ಮೇಗೌಡ, ಮಿಣ್ಣಾಪುರ ಕಾಂತರಾಜು, ಮೋಹನ್ ಕುಮಾರ್, ಮಾಚನಹಳ್ಳಿ ಜಯಣ್ಣ , ಬೇಗೂರು ಸಹಕಾರಿ ಸಂಘದ ಅಧ್ಯಕ್ಷ ಬೈರೇಗೌಡ, ಸದಸ್ಯ ಕುಮಾರ್, ರಾಜಣ್ಣ , ಭೋಜರಾಜು, ಕಳಲುಘಟ್ಟ ಗ್ರಾ.,ಪಂ ಸದಸ್ಯ ಲೋಕೇಶ್, ಶ್ರೀನಿವಾಸ್, ಸಂಘದ ನಿರ್ದೇಶಕರಾದ ನರಸಿಂಹಮೂರ್ತಿ, ರಮೇಶ್, ಈರಯ್ಯ, ಗಂಗಹನುಮಯ್ಯ, ಮಂಜುಳಾ, ರತ್ನಮ್ಮ , ನರಸಿಂಹಮೂರ್ತಿ, ಲಕ್ಕಪ್ಪನಹಳ್ಳಿ ಹೇಮಂತ್, ಸಿದ್ದರಾಜು, ನಟರಾಜು, ಉಮೇಶ್, ಸಿಇಓ ಕೆಂಪಣ್ಣ ಹಾಗೂ ಸಿಬ್ಬಂದಿಗಳು,ಸಂಘದ ಸದಸ್ಯರು ಹೂಮಾಲೆ ಹಾಕುವ ಮೂಲಕ ಅಭಿನಂದಿಸಿದರು.

## ಚೀಟಿ ನಷ್ಟದ ನಂತರ ಮಾಡಿದ ತಪ್ಪೇ ಜೀವಕ್ಕೆ ಬೆಂಕಿಯಾದ ಕ್ಷಣ



**ದೇವನಹಳ್ಳ:** ಮಧ್ಯರಾತ್ರಿ ವೇಳೆ ಸಹೋದರನ ಮನೆ ಸುಡಲು ಹೋಗಿ ಆ ಬೆಂಕಿಯಲ್ಲಿ ತಾನೇ ಸುಟ್ಟು ವ್ಯಕ್ತಿಯೋರ್ವ ಆಸ್ಪತ್ರೆ ಸೇರಿರುವ ಘಟನೆ ಹೊಸಕೋಟೆ ತಾಲೂಕಿನ ಗೋವಿಂದಪುರ ಗ್ರಾಮದಲ್ಲಿ ನಡೆದಿದೆ. ಘಟನೆಯ ದೃಶ್ಯ ಮನೆಯ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದ್ದು, ಗಂಭೀರ ಗಾಯಗೊಂಡಿರುವ ಮುನಿರಾಜು ಎಂಬಾತನಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗ್ತಿದೆ ಆದ್ರೆ ಅಣ್ಣನ ಕುಟುಂಬವನ್ನೇ ನಿರ್ನಾಮ ಮಾಡಲು ಹೋದ ಮುನಿರಾಜುವಿಗೆ ದೇವರು ಅಲ್ಲೇ ಶಿಕ್ಷೆ ಕೊಟ್ಟಿದ್ದಾನೆ. ಬೆಂಕಿ ಹಚ್ಚುವ ವೇಳೆ ಈತನ ಕೈನಲ್ಲಿ ಪೆಟ್ರೋಲ್ ಡಬ್ಬ ಇದ್ದ ಕಾರಣ ಏಕಾಏಕಿ ಹೊತ್ತಿಕೊಂಡ ಬೆಂಕಿ ಈತನನ್ನೇ ಸುಟ್ಟಿದೆ.

ಬೆಂಕಿ ಹೊತ್ತಿಕೊಳ್ಳುತ್ತಿದ್ದಂತೆ ಕಾಪಾಡಿ ಕಾಪಾಡಿ ಅಂತ ಮುನಿರಾಜು ಕಿರುಚಾಡಿದ್ದು, ಕೂಡಲೇ ಅಕ್ಕಪಕ್ಕದ ಮನೆಯವರು ಸಹಾಯಕ್ಕೆ ಧಾವಿಸಿದ್ದಾರೆ. ಗಾಯಾಳುವಿಗೆ ಹೊಸಕೋಟೆ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗ್ತಿದ್ದು, ಈ ಬಗ್ಗೆ ತಿರುಮಲಶೆಟ್ಟಿಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ :9538786812/8217606793

## ತಾಯಿ ಮೇಲಿನ ದ್ವೇಷಕ್ಕೆ ಮುಗ್ಧ ಮಗುವಿನ ಕತ್ತು ಹಿಸುಕಿ ಕೊಲೆ



**ಬೆಂಗಳೂರು:** ನಗರದ ವೈಟ್‌ಫೀಲ್ಡ್ ಪೊಲೀಸ್ ಠಾಣೆ ವ್ಯಾಪ್ತಿಯ ನಲ್ಲೂರಹಳ್ಳಿಯಲ್ಲಿ 6 ವರ್ಷದ ಮಗುವನ್ನು ದಾರುಣವಾಗಿ ಕೊಲೆ ಮಾಡಿರುವ ಘಟನೆ ನಡೆದಿದೆ. ತಾಯಿಯ ಮೇಲಿನ ದ್ವೇಷದಿಂದ ಮಗಳನ್ನು ಹತ್ಯೆ ಮಾಡಲಾಗಿದೆ ಎಂಬ ಶಂಕೆ ವ್ಯಕ್ತವಾಗಿದ್ದು, ಆರೋಪಿಗಾಗಿ ತೀವ್ರ ಶೋಧ ನಡೆಯುತ್ತಿದೆ.

ಶವವನ್ನು ಬ್ಯಾಗ್‌ನಲ್ಲಿ ಕಟ್ಟಿ ಮೋರಿಗೆ ಬಿಸಾಕಿದ ಪಾಪಿ!

ಕೋಲ್ಕತ್ತಾ ಮೂಲದ 6 ವರ್ಷದ ಬಾಲಕಿ ಶಹಜಾನ್ ಕತೂನ್‌ನ ಕತ್ತು ಹಿಸುಕಿ ಕೊಲೆಗೊಂಡಿರುವ ಘಟನೆ ನಗರವನ್ನೇ ಬೆಚ್ಚಿಬೀಳಿಸಿದೆ. ತಾಯಿ ಮೇಲಿನ ದ್ವೇಷಕ್ಕೆ ಮುಗ್ಧ ಮಗುವನ್ನೇ ಗುರಿಯಾಗಿಸಿರುವ ಶಂಕೆ ವ್ಯಕ್ತವಾಗಿದೆ. ಬಾಲಕಿಯ ತಂದೆ ಇಂಜಮುಲ್ ಶೇಕ್ ಲೇಬರ್ ಕೆಲಸ ಮಾಡುತ್ತಿದ್ದು, ನಿನ್ನೆ (ಜ.6) ಮಧ್ಯಾಹ್ನ ತಮ್ಮ ಮಗಳು ಒಂದು ದಿನದಿಂದ ಕಾಣೆಯಾಗಿರುವುದಾಗಿ ವೈಟ್‌ಫೀಲ್ಡ್ ಠಾಣೆಗೆ ದೂರು ನೀಡಿದ್ದರು. ದೂರು ಆಧರಿಸಿ ಪ್ರಕರಣ ದಾಖಲಿಸಿಕೊಂಡ ಪೊಲೀಸರು ಸಿಸಿಟಿವಿ ದೃಶ್ಯಾವಳಿ ಹಾಗೂ ತಾಂತ್ರಿಕ ಮಾಹಿತಿ ಪರಿಶೀಲನೆ ನಡೆಸಿದ್ದರು. ಈ ವೇಳೆ ಬಾಲಕಿ ಪರಿಚಿತ ವ್ಯಕ್ತಿಯೊಂದಿಗೇ ಹೋಗಿರುವುದು ದೃಢಪಟ್ಟಿತ್ತು.

ಈ ಹಿನ್ನೆಲೆಯಲ್ಲಿ ನಲ್ಲೂರಹಳ್ಳಿ ಪ್ರದೇಶದಲ್ಲಿ ಪೊಲೀಸರು ಮಧ್ಯರಾತ್ರಿವರೆಗೆ ಕೂಂಬಿಂಗ್ ರೀತಿಯ ಕಾರ್ಯಾಚರಣೆ ನಡೆಸಿದ್ದಾರೆ. ಮಧ್ಯರಾತ್ರಿ ದೇವಸ್ಥಾನ ರಸ್ತೆಯ ಮೋರಿಯೊಂದರಲ್ಲಿ ಬ್ಯಾಗ್‌ನೊಳಗೆ ಪತ್ತೆಯಾಗಿದ್ದ ಬಾಲಕಿಯ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ.

ಪ್ಲಾಸ್ಟಿಕ್ ವೈರ್‌ನಿಂದ ಕುತ್ತಿಗೆ ಬಿಗಿದು ಕೊಲೆ ಪೊಲೀಸರ ಪ್ರಾಥಮಿಕ ತನಿಖೆಯಲ್ಲಿ ಪ್ಲಾಸ್ಟಿಕ್ ವೈರ್‌ನಿಂದ ಕುತ್ತಿಗೆ ಬಿಗಿದು ಕೊಲೆ ಮಾಡಿರುವುದು ತಿಳಿದುಬಂದಿದೆ. ಮೃತದೇಹದ ಮೇಲೆ ಯಾವುದೇ ಹಲ್ಲೆ ಅಥವಾ ಲೈಂಗಿಕ ದೌರ್ಜನ್ಯದ ಗುರುತುಗಳು ಕಂಡುಬಂದಿಲ್ಲ ಎಂದು ವೈಟ್‌ಫೀಲ್ಡ್ ಡಿಸಿಪಿ ತಿಳಿಸಿದ್ದಾರೆ. ಸ್ಥಳೀಯರು ಹೇಳುವಂತೆ ಆರೋಪಿ ಕುಟುಂಬ ಮತ್ತು ಬಾಲಕಿಯ ಕುಟುಂಬದ ನಡುವೆ ಹಿಂದಿನಿಂದಲೂ ವೈಷಮ್ಯವಿದ್ದು, ತಾಯಿ ಮೇಲಿನ ದ್ವೇಷದಿಂದಲೇ ಈ ಕೃತ್ಯ ನಡೆದಿರಬಹುದು ಎನ್ನಲಾಗಿದೆ. ಆರೋಪಿ ಯಾರು ಎಂಬುದು ಪೊಲೀಸರಿಗೆ ಗೊತ್ತಾಗಿದ್ದು, ವಿಶೇಷ ತಂಡ ರಚಿಸಿ ಹುಡುಕಾಟ ಮುಂದುವರಿದಿದೆ.

## ಶ್ರೀಕ್ಷೇತ್ರದ ವತಿಯಿಂದ ಸೋಮನಹಳ್ಳಿಯಲ್ಲಿ ತಾಲೋಕು ಮಟ್ಟದ ಮಹಿಳಾ ವಿಚಾರಗೋಷ್ಠಿ



ಕೆ.ಆರ್.ಪೇಟೆ: ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿಸಿ ಟ್ರಸ್ಟ್ (ರಿ ) ಕೆ . ಆ ರ್ . ಪೇ ಟೆ , ಜ್ಞಾ ನ ವಿ ಕಾ ಸ ಕಾರ್ಯಕ್ರಮದಡಿಯಲ್ಲಿ ಕೆ.ಆರ್.ಪೇಟೆ ತಾಲೋಕಿನ ಸೋಮನಹಳ್ಳಿ ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ ಕಾರ್ಯಕ್ರಮವನ್ನು ಸೋಮನಹಳ್ಳಿಯಲ್ಲಿರುವ ಬೋರಮ್ಮಮುದ್ದೇಗೌಡ ಸಭಾ ಮಂಟ ಪದಲ್ಲಿ ಆರ್.ಟಿ.ಓ ಮಲ್ಲಿಕಾರ್ಜುನ್,ಜಿಲ್ಲಾ ಜನಜಾಗೃತಿ ವೇದಿಕೆ ಜಿಲ್ಲಾಧ್ಯಕ್ಷರು,ಗಣ್ಯರು ಜ್ಯೋತಿ ಬೆಳಗಿಸುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಪ್ರೀತಿ ಪೂರ್ವಕವಾಗಿ ಎಲ್ಲರನ್ನು ತಾಲೂಕಿನ ಮಾನ್ಯ ಯೋಜನಾದಿಕಾರಿವರಾದ ತಿಲಕ್ ರಾಜ್ ರವರು ಪ್ರೀತಿ ಪೂರ್ವಕವಾಗಿ ಸ್ವಾಗತಿಸಿದರು.

ಗೌರವಾನ್ವಿತ ಜಿಲ್ಲಾ ನಿರ್ದೇಶಕರಾದ ಯೋಗೀಶ್ ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಸಂಸ್ಥೆಯ ಆಶಯದ ಬಗ್ಗೆ ಸದಸ್ಯರುಗಳಿಗೆ ತಿಳಿಸುತ್ತಾ ಜ್ಞಾನವಿಕಾಸ ಕಾರ್ಯಕ್ರಮ ವಾತ್ಸಲ್ಯ ಕಾರ್ಯಕ್ರಮಗಳ ಬಗ್ಗೆ ಜ್ಞಾನವಿಕಾಸ ಕೇಂದ್ರದಲ್ಲಿ ಸದಸ್ಯರು ಸಕ್ರಿಯವಾಗಿ ಭಾಗವಹಿಸಿ ಕಾರ್ಯಕ್ರಮದ ಸೌಲಭ್ಯಗಳನ್ನು ಪಡೆಯಬೇಕು ಸದಸ್ಯರು ಕುಟುಂಬದಲ್ಲಿ ಅನ್ಯೋನ್ಯತೆಯನ್ನು ಕಾಪಾಡಿಕೊಂಡು ಬರಬೇಕು ಹಿರಿಯ ನಾಗರಿಕರಿಗೆ ಗೌರವ ಕೊಡುವುದು ಮಕ್ಕಳಿಗೆ ಉತ್ತಮ ಸಂಸ್ಕಾರ ಕಲಿಸಿ ಕೊಡುವುದು ಪೋಷಕರ ಜವಾಬ್ದಾರಿಯಾಗಿದೆ ಎಂದು ಸವಿಸ್ಥಾರವಾದ ಮಾಹಿತಿ ನೀಡಿದರು.


ಕಾರ್ಯಕ್ರಮದಲ್ಲಿಕ್ಷೇತ್ರ ಆರೋಗ್ಯ ಶಿಕ್ಷಣಾದಿಕಾರಿಗಳಾದ ಶಿವಮ್ಮ ಸದಸ್ಯರುಗಳಿಗೆ ಹೆಣ್ಣುಮಕ್ಕಳ ಭ್ರೂಣ ಹತ್ಯೆ , ಸ್ತನದ ಕ್ಯಾನ್ಸರ್ , ಗರ್ಭಕೋಶದ ಕ್ಯಾನ್ಸರ್ , ಇವುಗಳ ಬಗ್ಗೆ ಸವಿಸ್ಥಾರವಾದ ಮಾಹಿತಿ ನೀಡಿದರು,

ಆರಕ್ಷಕ ನಿರೀಕ್ಷಕರಾದ ಸುಮಾರಾಣಿ ಸದಸ್ಯರುಗಳಿಗೆ ಸೈಬರ್ ಕ್ರೈಂಗಳ ಬಗ್ಗೆ ಹಾಗು ಸಾಮಾಜಿಕ ಜಾಲತಾಣ , ಕಾನೂನಿನ ಬಗ್ಗೆ , ಬೆರಳಚ್ಚು ಕೊಡುವಾಗ ಎಚ್ಚರ ವಹಿಸಿ ಅದನ್ನು ಲಾಕ್ ಮಾಡಿಸುವ ಬಗ್ಗೆ , ಸುಳ್ಳು ಕರೆಗಳಿಗೆ ಓ. ಟಿ.ಪಿ. ಮತ್ತು ಬ್ಯಾಂಕಿನ ವಿವರ ಶೇರ ಮಾಡಬಾರದೆಂದು ಇನ್‌ಸ್ಟಾಗ್ರಾಮ್ ಬಳಕೆ , ಪಬ್ಲಿಕ್ ಮತ್ತು ಪ್ರೈವೇಟ್ ಅಕೌಂಟ್ , ಮಕ್ಕಳು ಮೊಬೈಲ್ ಬಳಕೆ ತಿಳಿಯಲು ಪೇರೆಂಟ್ ಇನ್ ಆಪ್ ಬಗ್ಗೆ , ಬಾಲ್ಯವಿವಾಹದ ಬಗ್ಗೆ , KSP ಆಪ್ ಮೂಲಕ ಕಂಪ್ಲೇಂಟ್ ಮಾಡುವ ಬಗ್ಗೆ ಉತ್ತಮವಾದ ಮಾಹಿತಿ ನೀಡಿದರು,

ಕಾರ್ಯಕ್ರಮದಲ್ಲಿ ಮೂಕಾಂಬಿಕ ಜ್ಞಾನವಿಕಾಸ ಯೋಜನಾದಿಕಾರಿಯವರು ಪ್ರಾದೇಶಿಕ ಕಛೇರಿ ಮೈಸೂರು, ಕಾರ್ಯಕ್ರಮದ ಬಗ್ಗೆ ಶುಭ ಹಾರೈಸಿ ಹಿತವಚನ ನುಡಿದರು. ಈ ಸಂದರ್ಭದಲ್ಲಿ ಸೋಮನಹಳ್ಳಿ ಗ್ರಾ.ಪಂ. ಅಧ್ಯಕ್ಷರಾದ ಜಯಲಕ್ಷಮ್ಮ , ಡಾ.ಅಂ.ಚಿ. ಸಣ್ಣಸ್ವಾಮಿ ಗೌಡ , ರಾಷ್ಟ ಪ್ರಶಸ್ತಿ ಪುರಸ್ಕೃತ ರು ಅಂಬಿಗರಹಳ್ಳಿ ,ಕೃಷ್ಟೇಗೌಡ ಗ್ರಾಮದ ಮುಖಂಡರು ಕಾಂತರಾಜು, ಪ್ರಸನ್ನ ಕಾರ್ಯಕ್ರಮದಲ್ಲಿ ಶುಭ ಹಾರೈಸಿ ಹಿತವಚನಗಳನ್ನು ನುಡಿದರು.

ಕಾರ್ಯಕ್ರಮದಲ್ಲಿ ಪುಷ್ಪ ಗುಚ್ಛ ಸ್ಪರ್ಧೆ ,ರಂಗೋಲಿ ಸ್ಪರ್ಧೆ , ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿ ಬಹುಮಾನ ವಿತರಣೆ ಮಾಡಲಾಯಿತು ಮತ್ತು ಸಾದಕರನ್ನು ಗುರುತಿಸಿ ಸನ್ಮಾನಿಸಲಾಯಿತು, ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಡೆಸಲು ಮಾಹಿತಿ ಮಾರ್ಗದರ್ಶನ ನೀಡಿದ ಗೌರವಾನ್ವಿತ ಜಿಲ್ಲಾ ನಿರ್ದೇಶಕರು, ತಾಲ್ಲೋಕು ಯೋಜನಾಧಿಕಾರಿ, ಜ್ಞಾನವಿಕಾಸ ಯೋಜನಾಧಿಕಾರಿ ಎಲ್ಲಾ ಕೆಲಸ ಕಾರ್ಯಗಳಲ್ಲಿ ಸಹಕಾರ ನೀಡಿ ವಲಯದಲ್ಲಿ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಲು ಪೂರ್ವ ತಯಾರಿ ಮಾಡಿಸಿ ಸಹಕರಿಸಿದ ವಲಯದ ಮೇಲ್ವಚಾರಕರಾದ ಮಿಥುನ್, ವಲಯದ ಎಲ್ಲಾ ಸೇವಾಪ್ರತಿನಿದಿಗಳಾದ ಮೀನಾಕ್ಷಿ, ಶೃತಿ, ತಾರಾಮಣಿ , ಮಮತ,ರಾಣಿ, ನಿರ್ಮಲ , ಸುದಾ , ರೂಪ , ಗಿರೀಶ್ , ಬೂಕನಕೆರೆ ವಲಯದ ಮೇಲ್ವಚಾರಕರಾದ ಪ್ರಕಾಶ್,ಆಲಂಬಾಡಿ ವಲಯದ ಗಣಪತಿ, ಸೇವಾ ಪ್ರತಿನಿಧಿಗಳಾದ ಹೀನಾ ಪರ್ವಿನ್, ಚನ್ನಕೇಶವ, ಕವಿತ ,ಕೃಷಿ ಮೇಲ್ವಚಾರಕರಾದ ಮಂಜುನಾಥ್ ರವರಿಗೆ

## ಇಬ್ಬರು ಮಕ್ಕಳೊಂದಿಗೆ ಸಂಪ್‌ಗೆ ಹಾರಿ ತಾಯಿ ಆತ್ಮಹತ್ಯೆ

**ತುಮಕೂರು:** ತಾಯಿ ಮತ್ತು ಇಬ್ಬರು ಪುಟ್ಟ ಮಕ್ಕಳ ಶವ ಮನೆಯ ಸಂಪ್‌ನಲ್ಲಿ ಪತ್ತೆಯಾಗುವ ತುಮಕೂರಿನ ಸಿಂಗನಹಳ್ಳಿಯಲ್ಲಿ ನಡೆದಿದೆ. ಈ ಘಟನೆಯು ಬುಧವಾರ ಮಧ್ಯಾಹ್ನ ಬೆಳಕಿಗೆ ಬಂದಿದ್ದು, ವಿಜಯಲಕ್ಷ್ಮೀ ಮತ್ತು ಅವರ ಮಕ್ಕಳಾದ ಚೇತನ ಹಾಗೂ ಚೈತನ್ಯ ಮೃತಪಟ್ಟ ದುರ್ದೈವಿಗಳಾಗಿದ್ದಾರೆ.

**ಘಟನೆಯ ಹಿನ್ನೆಲೆ:**

ಮೂಲತಃ ಶಿವಗಂಗೆಯವರಾದ ಸಂಪತ್ ಅವರು ಕಳೆದ 30 ವರ್ಷಗಳಿಂದ ಸಿಂಗನಹಳ್ಳಿಯಲ್ಲಿ ವಾಸವಿದ್ದಾರೆ. ಖಾಸಗಿ ಫ್ಯಾಕ್ಟರಿಯಲ್ಲಿ ಕೆಲಸ ಮಾಡುವ ಇವರು, ಪತ್ನಿ ವಿಜಯಲಕ್ಷ್ಮೀ, ಇಬ್ಬರು ಮಕ್ಕಳು ಹಾಗೂ ಪೋಷಕರೊಂದಿಗೆ ಬಾಡಿಗೆ ಮನೆಯಲ್ಲಿ ವಾಸವಿದ್ದರು. ಪ್ರತಿದಿನದಂತೆ ಸಂಪತ್ ಮತ್ತು ಅವರ ತಾಯಿ ರೇಣುಕಮ್ಮ ಕೆಲಸಕ್ಕೆ ಹೋಗಿದ್ದರು. ಮನೆಯಲ್ಲಿದ್ದ ಮಾವ ಹನುಮಂತರಾಜು ಕೂಡ ಕೆಲಸದ ನಿಮಿತ್ತ ನೆಲಮಂಗಲಕ್ಕೆ ಹೋಗಿದ್ದರು. ಈ ಸಮಯದಲ್ಲಿ ಮನೆಯಲ್ಲಿ ವಿಜಯಲಕ್ಷ್ಮೀ ಮತ್ತು ಇಬ್ಬರು ಮಕ್ಕಳು ಮಾತ್ರ ಮನೆಲ್ಲಿದ್ದಾರೆ. ಮಧ್ಯಾಹ್ನದ ವೇಳೆ ಕೆಲಸ ಮುಗಿಸಿ ಸಂಪತ್ ಮನೆಗೆ ಬಂದಾಗ ಪತ್ನಿ ಮತ್ತು ಮಕ್ಕಳು ಕಾಣಿಸಲಿಲ್ಲ. ಆತಂಕಗೊಂಡ ಸಂಪತ್ ಮನೆಯ ಸುತ್ತಮುತ್ತ ಹುಡುಕಾಡಿದರೂ ಪ್ರಯೋಜನವಾಗಲಿಲ್ಲ. ಮನೆಯ ಮುಂದಿನ ಸಂಪ್‌ನ ಮುಚ್ಚಳ ತೆರೆದಿರುವುದನ್ನು ಗಮನಿಸಿ ಇಣುಕಿ ನೋಡಿದಾಗ, ಪತ್ನಿ ಮತ್ತು ಮಕ್ಕಳ ಶವಗಳು ತೇಲುತ್ತಿರುವುದು ಕಂಡುಬಂದಿದೆ. ಕೂಡಲೇ ಅವರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

**ಡೆತ್‌ನೋಟ್ ಮತ್ತು ಪೊಲೀಸರ ಶಂಕೆ:**

ಸ್ಥಳಕ್ಕೆ ಭೇಟಿ ನೀಡಿದ ಕ್ಯಾತ್ಸಂದ್ರ ಪೊಲೀಸರು ಪರಿಶೀಲನೆ ನಡೆಸಿದಾಗ ಮನೆಯಲ್ಲಿ ವಿಜಯಲಕ್ಷ್ಮೀ ಬರೆದಿದ್ದಾರೆ ಎನ್ನಲಾದ ಡೆತ್‌ನೋಟ್ ಪತ್ತೆಯಾಗಿದೆ. ನಮ್ಮ ಸಾವಿಗೆ ಯಾರೂ ಕಾರಣರಲ್ಲ ಎಂದು ಅದರಲ್ಲಿ ಉಲ್ಲೇಖಿಸಲಾಗಿದೆ. ವಿಜಯಲಕ್ಷ್ಮೀ ಅವರು ಕಳೆದ ಕೆಲವು ದಿನಗಳಿಂದ ಮಾನಸಿಕ ಖಿನ್ನತೆಯಿಂದ ಬಳಲುತ್ತಿದ್ದರು ಎನ್ನಲಾಗಿದ್ದು, ಅದೇ ಕಾರಣಕ್ಕೆ ಮಕ್ಕಳೊಂದಿಗೆ ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ.


ಆದರೆ, ತಾಯಿ ಆತ್ಮಹತ್ಯೆ ಮಾಡಿಕೊಂಡಿದ್ದರೂ, ಅಸಹಾಯಕ ಮಕ್ಕಳನ್ನು ಸಂಪ್‌ಗೆ ದೂಡಿ ಕೊಂದರಾ ಅಥವಾ ಮಕ್ಕಳು ತಾವಾಗಿಯೇ ಬಿದ್ದರಾ ಎಂಬುದು ಪೊಲೀಸರಿಗೆ ಗೊಂದಲ ಸೃಷ್ಟಿಸಿದೆ. ಪ್ರಸ್ತುತ ಮೃತಳ ಸಹೋದರ ನೀಡಿದ ದೂರಿನ ಮೇರೆಗೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ತನಿಖೆಯನ್ನು ತೀವ್ರಗೊಳಿಸಿದ್ದಾರೆ. ಒಂದೇ ಕುಟುಂಬದ ಮೂವರು ಸಾವನ್ನಪ್ಪಿರುವುದು ಗ್ರಾಮಸ್ಥರು ಆತಂಕ ಪಡುವಂತೆ ಮಾಡಿದೆ. ಮೃತ ದೇಹಗಳನ್ನ ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಲಾಗಿದೆ. ಸದ್ಯ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದು, ತನಿಖೆ ಮುಂದುವರೆದಿದೆ.

## ಕಾರಿನಲ್ಲಿ ಬೆಂಕಿ ಅವಘಡ: ಇಬ್ಬರು ಸಜೀವ ದಹನ

**ಕಾರವಾರ:** ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ತಾಲೂಕಿನ ಗೇರುಸೊಪ್ಪ-ಸುಳೆಮುರ್ಕಿ ಕ್ರಾಸ್ ಹತ್ತಿರ ಭೀಕರ ರಸ್ತೆ ಅಪಘಾತ ಸಂಭವಿಸಿದೆ. ಈ ವೇಳೆ ಕಾರು ಪಲ್ಟಿಯಾಗಿ ಬೆಂಕಿಗೆ ಆಹುತಿಯಾದ ಪರಿಣಾಮ ಇಬ್ಬರು ಸಜೀವ ದಹನಗೊಂಡಿದ್ದಾರೆ. ನಿನ್ನೆ ತಡರಾತ್ರಿ ಘಟನೆ ನಡೆದಿರುವ ಸಾಧ್ಯತೆ ಇದ್ದು, ವೇಗವಾಗಿ ಚಲಿಸುತ್ತಿದ್ದ ಕಾರು ನಿಯಂತ್ರಣ ತಪ್ಪಿ ಮೊದಲು ಮರಕ್ಕೆ ಡಿಕ್ಕಿ ಹೊಡೆದಿದೆ. ನಂತರ ಕಂದಕಕ್ಕೆ ಉರುಳಿರುವ ಅನುಮಾನ ವ್ಯಕ್ತವಾಗಿದೆ. ಕಂದಕಕ್ಕೆ ಬೀಳುತ್ತಿದ್ದಂತೆ ಬೆಂಕಿ ಹೊತ್ತಿಕೊಂಡಿದ್ದು, ಕ್ಷಣಾರ್ಧದಲ್ಲಿ ಕಾರು ಹೊತ್ತಿ ಉರಿದಿದೆ. ಕಾರಿನಲ್ಲಿದ್ದ ಇಬ್ಬರು ಪ್ರಯಾಣಿಕರು ಹೊರಬರಲಾಗದೇ ಸಜೀವ ದಹನವಾಗಿದ್ದಾರೆ. ಬೆಂಕಿಯ ತೀವ್ರತೆಗೆ ಕಾರು ಹಾಗೂ ಮೃತರ ಗುರುತು ಪತ್ತೆಯಾಗದಷ್ಟು ಸುಟ್ಟು ಕರಕಲಾಗಿದೆ ಕಾರಿನ ನಂಬರ್ ಪ್ಲೇಟ್ ಸಹ ಸಂಪೂರ್ಣವಾಗಿ ಸುಟ್ಟು ಹೋಗಿರುವುದರಿಂದ, ವಾಹನದ ಮಾಲೀಕತ್ವ ಹಾಗೂ ಮೃತರ ಗುರುತು ಪತ್ತೆ ಮಾಡುವುದು ಪೊಲೀಸರಿಗೆ ಸವಾಲಾಗಿ ಪರಿಣಮಿಸಿದೆ. ಘಟನಾ ಸ್ಥಳಕ್ಕೆ ಹೊನ್ನಾವರ ಪೊಲೀಸರು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಧಾವಿಸಿ ಬೆಂಕಿ ನಂದಿಸುವ ಕಾರ್ಯಾ ನಡೆಸಿದ್ದಾರೆ. ಪ್ರಸ್ತುತ ಕಾರು ಮತ್ತು ಮೃತರ ಗುರುತು ಪತ್ತೆಗಾಗಿ ಪೊಲೀಸರು ವಿಶೇಷ ತನಿಖೆ ಕೈಗೊಂಡಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಹಣದಾಸೆಗೆ ಹೆತ್ತ ಮಗಳನ್ನೇ ವೇಶ್ಯಾವಾಟಿಕೆಗೆ ತಳ್ಳಿದ ಪಾಪಿ ತಂದೆ

**ಚಿಕ್ಕಮಗಳೂರು:** ಕೇವಲ ಹಣದ ಆಸೆಗಾಗಿ ತನ್ನ ಅಪ್ರಾಪ್ತ ಮಗಳನ್ನೇ ವೇಶ್ಯಾವಾಟಿಕೆ ದಂಧೆಗೆ ತಳ್ಳಿದ ಅಮಾನವೀಯ ಕೃತ್ಯ ಮಗಳೂರು ಜಿಲ್ಲೆಯ ಬೀರೂರಿನಲ್ಲಿ ಬೆಳಕಿಗೆ ಬಂದಿದೆ. ಸಂತ್ರಸ್ತ ತಾಯಿ ಕಳೆದುಕೊಂಡ ನಂತರ ಅವಳ ಸಂಬಂಧಿಕರ ಮನೆಯಲ್ಲಿ ವಾಸವಿದ್ದಳು. ಅಲ್ಲೇ ಪಿಯುಸಿವರೆಗೆ ವಿದ್ಯಾಭ್ಯಾಸ ಕೂಡ ಮುಗಿಸಿದ್ದಳು. ಇತ್ತೀಚೆಗಷ್ಟೇ ತಂದೆಯ ಮನೆಗೆ ಮರಳಿದ್ದ ಬಾಲಕಿಯನ್ನು ಡಿಸೆಂಬರ್ ತಿಂಗಳಲ್ಲಿ ಅಜ್ಜಿಯ ಮನೆಗೆ ಕರೆದುಕೊಂಡು ಹೋಗಲಾಗಿತ್ತು. ಅಲ್ಲಿ ಭರತ್ ಶೆಟ್ಟಿ ಎಂಬ ದಂಧೆಕೋರನ ಪರಿಚಯವಾಗಿದ್ದು, ತಂದೆಯೊಂದಿಗೆ ಸಲುಗೆ ಬೆಳೆಸಿದ್ದ. ದಿನಕ್ಕೆ 5 ಸಾವಿರ ರೂಪಾಯಿ ಹಣ ಸಿಗುತ್ತದೆ ಎಂಬ ಆಮಿಷಕ್ಕೆ ಬಲಿಯಾದ ತಂದೆ, ತನ್ನ ಅವರಿಗೆ ಒಪ್ಪಿಸಿದ್ದಾರೆ. ಮಂಗಳೂರಿನಲ್ಲಿ ನಡೆದ

**ಪೈಶಾಚಿಕ ಕೃತ್ಯ:**

ತಂದೆಯ ಸೂಚನೆಯಂತೆ ಬಾಲಕಿ ಭರತ್ ಶೆಟ್ಟಿಯೊಂದಿಗೆ ಮಂಗಳೂರಿಗೆ ತೆರಳಿದ್ದಳು. ಮಾರ್ಗಮಧ್ಯದಲ್ಲಿ ತಾನು ಮುಟ್ಟಾಗಿರು ವುದಾಗಿ (ಋತುಸ್ರಾವ) ತಂದೆಗ ತಿಳಿಸಿ ಮನೆಗೆ ಮರಳುವಂತೆ ವಿನಂತಿಸಿದ್ದರೂ, ತಂದೆ ಅದಕ್ಕೆ ಕಿವಿಗೊಡದೇ ಆಕೆಯನ್ನ ಅವನೊಟ್ಟಿಗೆ ಹೋಗಲು ಒತ್ತಾಯಿಸಿದ್ದಾನೆ .ನಂತರ ಮಂಗಳೂರಿನಲ್ಲಿ ಭರತ್ ಶೆಟ್ಟಿ ಬಾಲಕಿಯನ್ನು ದೈಹಿಕ ಸಂಪರ್ಕಕ್ಕಾಗಿ ಒತ್ತಾಯಿಸಿದ್ದಾನೆ. ನಾವು ಭರತ್ ಶೆಟ್ಟಿಗೆ ಹಣ ನೀಡಿದ್ದೇವೆ ಎಂದು ಹೇಳುತ್ತಾ 20 ರಿಂದ 45 ವರ್ಷದ ನಾಲ್ವರು ಕಾಮುಕರು ಎರಡು ದಿನಗಳ ಕಾಲ ಸತತವಾಗಿ ಆಕೆಯ ಮೇಲೆ ಅತ್ಯಾಚಾರವೆಸಗಿದ್ದಾರೆ. ಬಾಲಕಿ ತಾನು ಅಪ್ರಾಪ್ತೆ ಎಂದು ಎಷ್ಟೇ ಬೇಡಿಕೊಂಡರೂ ಆಕೆಯನ್ನ ಬಿಡದೇ ಈ ಕೃತ್ಯ ಎಸಗಿದ್ದಾರೆ.

**ಪೊಲೀಸ್ ಕಾರ್ಯಚರಣೆ**

ಬಾಲಕಿ ಹೇಗೋ ಅಲ್ಲಿಂದ ತಪ್ಪಿಸಿಕೊಂಡು ಬಂದು ಪೊಲೀಸರಿಗೆ ದೂರು ನೀಡಿದ್ದಾಳೆ. ಪೊಲೀಸರು ತಕ್ಷಣ ಕಾರ್ಯಾಚರಣೆ ನಡೆಸಿ ಬಾಲಕಿಯ ತಂದೆ, ಅಜ್ಜಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಮಾಂಸ ದಂಧೆಯ ಕಿಂಗ್‌ಪಿನ್ ಭರತ್ ಶೆಟ್ಟಿ ಸೇರಿದಂತೆ ಒಟ್ಟು 12 ಮಂದಿಯನ್ನು ಬಂಧಿಸಿದ್ದಾರೆ. ಭರತ್ ಶೆಟ್ಟಿ ವಿರುದ್ಧ ಈಗಾಗಲೇ ಮಂಗಳೂರು ಮತ್ತು ಉಡುಪಿಯಲ್ಲಿ 8ಕ್ಕೂ ಹೆಚ್ಚು ವೇಶ್ಯಾವಾಟಿಕೆ ಪ್ರಕರಣಗಳು ದಾಖಲಾಗಿವೆ. ಬೀರೂರು ಪೊಲೀಸರು ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡಿದ್ದು, ಇನ್ನುಳಿದ ಆರೋಪಿಗಳ ಪತ್ತೆಗಾಗಿ ಬಲೆ ಬೀಸಿದ್ದಾರೆ. ಸದ್ಯ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಯಾವ ಕ್ರಮ ಕೈಗೊಳ್ಳುತ್ತಾರೆ ಎಂದು ಕಾದು ನೋಡಬೇಕಿದೆ. ಆರೋಪಿಗಳಿಗೆ ಕಠಿಣ ಶಿಕ್ಷೆಯಾಗಬೇಕು ಎಂದು ಸಾರ್ವಜನಿಕರು ಒತ್ತಾಯ ಮಾಡಿದ್ದಾರೆ.

# ಖಾಕಿ ಧರ್ಮ ಮರೆತ ಪೊಲೀಸ್‌ಗಳು: ಬಿಜೆಪಿ ಕಾರ್ಯಕರ್ತೆಯ ಮೇಲೆ ಹಲ್ಲೆ ಆರೋಪ



**ಹುಬ್ಬಳ್ಳಿ:** ಹುಬ್ಬಳ್ಳಿಯಲ್ಲಿ ಮಹಿಳಾ ಬಿಜೆಪಿ ಕಾರ್ಯಕರ್ತೆಯೊಬ್ಬರ ಮೇಲೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಮಾನವೀಯ ಹಲ್ಲೆ ನಡೆದಿದೆ ಎಂಬ ದೂರು ಕೇಳಿಬಂದಿದೆ. ಕಾಂಗ್ರೆಸ್ ಕಾರ್ಪೊರೇಟರ್ ನೀಡಿದ ದೂರಿನ ಮೇರೆಗೆ ಬಂಧಿತರಾದ ಬಿಜೆಪಿ ಕಾರ್ಯಕರ್ತೆ ಸುಜಾತಾ ಹಂಡಿ ಅವರನ್ನು ಪೊಲೀಸರು ವಿವಸ್ತ್ರಗೊಳಿಸಿ ಚಿತ್ರಹಿಂಸೆ ನೀಡಿದ್ದಾರೆ ಎಂಬ ಆರೋಪ ಕೇಳಿಬಂದಿದ್ದು, ರಾಜ್ಯ ರಾಜಕಾರಣದಲ್ಲಿ ಭಾರಿ ಚರ್ಚೆಗೆ ಕಾರಣವಾಗಿದೆ.

ಮತದಾರರ ಪಟ್ಟಿ ಪರಿಷ್ಕರಣೆ ಸಂದರ್ಭದಲ್ಲಿ ಕೇಶ್ವಾಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ ಕಾರ್ಯಕರ್ತರ ನಡುವೆ ಗಲಾಟೆ ನಡೆದಿತ್ತು. ಬಿಜೆಪಿ ಕಾರ್ಯಕರ್ತೆ ಸುಜಾತಾ ಹಂಡಿ ಅವರು ಅಧಿಕಾರಿಗಳ ಜೊತೆ ತೆರಳಿ ನಕಲಿ ಮತದಾರರ ಹೆಸರನ್ನು ಪಟ್ಟಿಯಿಂದ ತೆಗೆಸುತ್ತಿದ್ದಾರೆ ಎಂದು ಕಾಂಗ್ರೆಸ್ ಕಾರ್ಯಕರ್ತರು ಆರೋಪಿಸಿದ್ದರು. ಈ ವಿಚಾರವಾಗಿ ಕಾಂಗ್ರೆಸ್ ಕಾರ್ಪೊರೇಟರ್ ಸುವರ್ಣ ಕಲ್ಲಕುಂಟ್ಲಾ ಮತ್ತು ಸುಜಾತಾ ಹಂಡಿ ನಡುವೆ ತೀವ್ರ ಜಗಳವಾಗಿದೆ.



ಸುವರ್ಣ ಕಲ್ಲಕುಂಟ್ಲಾ ನೀಡಿದ ದೂರಿನ ಮೇರೆಗೆ ಪೊಲೀಸರು ಸುಜಾತಾ ಅವರ ಮೇಲೆ ಐಪಿಸಿ ಸೆಕ್ಷನ್ 307 (ಕೊಲೆ ಯತ್ನ) ಅಡಿಯಲ್ಲಿ ಪ್ರಕರಣ ದಾಖಲಿಸಿ ಬಂಧಿಸಿದ್ದರು. ಬಂಧನದ ವೇಳೆ ಪೊಲೀಸರು ಸುಜಾತಾ ಅವರನ್ನು ವಾಹನಕ್ಕೆ ಎಳೆದಾಡಿ, ವಿವಸ್ತ್ರಗೊಳಿಸಿ ಥಳಿಸಿದ್ದಾರೆ ಎಂದು ಸಂತ್ರಸ್ತೆಯ ಕುಟುಂಬದವರು ದೂರಿದ್ದಾರೆ. ಈ ವೇಳೆ ಪೊಲೀಸ್ ವ್ಯಾನಲ್ಲಿದ್ದ ಸಂಬಂಧಿಕರು ಪೊಲೀಸರ ವರ್ತನೆಯನ್ನು ವಿಡಿಯೋ ಮಾಡಿದ್ದು, ಈಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಈ ಭೀಕರ ಆರೋಪದ ಕುರಿತು ಪ್ರತಿಕ್ರಿಯಿಸಿರುವ ಹುಬ್ಬಳ್ಳಿ-ಧಾರವಾಡ ಪೊಲೀಸ್ ಆಯುಕ್ತರು, ಪೊಲೀಸರು ಮಹಿಳೆಯ ಮೇಲೆ ಹಲ್ಲೆ ಮಾಡಿಲ್ಲ. ಬಂಧನದ ವೇಳೆ ಪ್ರತಿರೋಧ ಒಡ್ಡಿದ ಸಂತ್ರಸ್ತೆಯೇ ಸ್ವತಃ ತನ್ನ ಬಟ್ಟೆಗಳನ್ನು ಹರಿದುಕೊಂಡು ನಗ್ನಳಾಗಿದ್ದಾಳೆ ಎಂದು ಹೇಳಿಕೆ ನೀಡಿದ್ದಾರೆ. ಸುಜಾತಾ ವಿರುದ್ಧ ಈಗಾಗಲೇ 9 ವಿವಿಧ ಪ್ರಕರಣಗಳನ್ನು ದಾಖಲಿಸಲಾಗಿದ್ದು, ಇದೆಲ್ಲವೂ ರಾಜಕೀಯ ಪ್ರೇರಿತ ಎಂದು ಕುಟುಂಬಸ್ಥರು ಆಕ್ರೋಶ ಹೊರಹಾಕಿದ್ದಾರೆ. ಸದ್ಯ ಘಟನೆಯ ವಿಡಿಯೋ ಸಾಕ್ಷ್ಯಗಳು ಸಾರ್ವಜನಿಕ ವಲಯದಲ್ಲಿ ಸಂಚಲನ ಮೂಡಿಸಿದ್ದು, ಈ ಕುರಿತು ಹೆಚ್ಚಿನ ತನಿಖೆಗಾಗಿ ಒತ್ತಾಯಿಸಿದ್ದಾರೆ.

# ಬಳ್ಳಾರಿ ಘಟನೆಗೆ ಹೊಸ ಟ್ವಿಸ್ಟ್; ಎಫ್‌ಎಸ್‌ಎಲ್-ಬಾಂಬ್ ಸ್ಕ್ವಾಡ್ ಸ್ಥಳ ಪರಿಶೀಲನೆ



**ಬಳ್ಳಾರಿ:** ಬಳ್ಳಾರಿಯಲ್ಲಿ ಬ್ಯಾನರ್ ಹರಿಯುವ ವಿಚಾರಕ್ಕೆ ಶುರುವಾದ ಕಿಡಿ, ಈಗ ಗುಂಡಿನ ದಾಳಿಯ ಆರೋಪ-ಪ್ರತ್ಯಾರೋಪದ ಹಂತಕ್ಕೆ ತಲುಪಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಜನಾರ್ದನ ರೆಡ್ಡಿ ಮತ್ತು ಭರತ್ ರೆಡ್ಡಿ ಬೆಂಬಲಿಗರ ನಡುವೆ ತೀವ್ರ ಆರೋಪ ಪತ್ಯಾರೋಪಗಳು ಕೇಳಿಬರುತ್ತಿವೆ.

ಪ್ರಕರಣಕ್ಕೆ ಹೊಸ ಟ್ವಿಸ್ಟ್ ಸಿಕ್ಕಿರುವುದು ಭರತ್ ರೆಡ್ಡಿ ಬೆಂಬಲಿಗರು ಬಿಡುಗಡೆ ಮಾಡಿರುವ ಒಂದು ಫೋಟೋದಿಂದ. ಜನಾರ್ದನ ರೆಡ್ಡಿ ಅವರ ಕಚೇರಿಯ ಮೇಲೆ ಸರ್ಕಾರಿ ಗನ್‌ಮ್ಯಾನ್ ಒಬ್ಬ ಗನ್ ಹಿಡಿದು ನಿಂತಿರುವ ಫೋಟೋವನ್ನು ಕಾಂಗ್ರೆಸ್ ಬಿಡುಗಡೆ ಮಾಡಿದೆ. ಫೈರಿಂಗ್ ನಡೆದದ್ದು ಕೇವಲ ನಮ್ಮ ಕಡೆಯಿಂದಲ್ಲ, ಜನಾರ್ದನ ರೆಡ್ಡಿ ಕಡೆಯವರಿಂದಲೂ ನಡೆದಿದೆ" ಎಂದು ಭರತ್ ರೆಡ್ಡಿ ಗಂಭೀರ ಆರೋಪ ಮಾಡಿದ್ದಾರೆ. ಈ ಫೋಟೋ ಆಧರಿಸಿ ಸರ್ಕಾರಿ ಗನ್‌ಮ್ಯಾನ್‌ನನ್ನು ತಕ್ಷಣ ವಿಚಾರಣೆಗೆ ಒಳಪಡಿಸಬೇಕೆಂದು ಕಾಂಗ್ರೆಸ್ ಒತ್ತಾಯಿಸಿದೆ.

ತನಿಖಾ ಕಣದಲ್ಲಿ ಎಫ್‌ಎಸ್‌ಎಲ್ ಮತ್ತು ಬಾಂಬ್ ಸ್ಕ್ವಾಡ್ ಘಟನೆ ನಡೆದ ಸ್ಥಳಕ್ಕೆ ಬಳ್ಳಾರಿ ಪೊಲೀಸರು ಭೇಟಿ ನೀಡಿದ್ದು, ತನಿಖೆಯನ್ನು ಚುರುಕುಗೊಳಿಸಿದ್ದಾರೆ. ಜನಾರ್ದನ ರೆಡ್ಡಿ ಬೆಂಬಲಿಗ ನಾಗರಾಜ್ ನೀಡಿದ ಅಟ್ರಾಸಿಟಿ ದೂರಿನ ಅನ್ವಯ ಪೊಲೀಸರು ಈಗಾಗಲೇ ವಿಚಾರಣೆ ನಡೆಸುತ್ತಿದ್ದಾರೆ. ಬ್ಯಾನರ್ ಹರಿದ ಜಾಗ ಹಾಗೂ ಗುಂಡಿನ ದಾಳಿ ನಡೆದಿದೆ ಎನ್ನಲಾದ ಸ್ಥಳಗಳನ್ನು ಎಫ್‌ಎಸ್‌ಎಲ್ (FSL) ತಂಡ ಮತ್ತು ಬಾಂಬ್ ನಿಷ್ಕ್ರಿಯ ದಳ ಅರೆಜಲ್ಲೆ ಹೊಡೆದು ಪರಿಶೀಲನೆ ನಡೆಸಿದೆ. ಸಿಸಿಟಿವಿ ಮತ್ತು ಬುಲೆಟ್ ಜಪ್ತಿ

ಜನಾರ್ದನ ರೆಡ್ಡಿ ಅವರು ಪೊಲೀಸರಿಗೆ ಹಸ್ತಾಂತರಿಸಿದ್ದ ಬುಲೆಟ್ ಅನ್ನು ಈಗ ಜಪ್ತಿ ಮಾಡಲಾಗಿದ್ದು, ಅದನ್ನು ಹೆಚ್ಚಿನ ತಾಂತ್ರಿಕ ಪರೀಕ್ಷೆಗೆ ಕಳುಹಿಸಲಾಗಿದೆ. ಕಚೇರಿ ಸುತ್ತಮುತ್ತಲಿನ ಸಿಸಿಟಿವಿ ದೃಶ್ಯಾವಳಿಗಳನ್ನು ವಶಪಡಿಸಿಕೊಂಡಿರುವ ಪೊಲೀಸರು, ಅಂದು ಅಸಲಿಗೆ ಏನಾಯಿತು ? ಮೊದಲು ಗುಂಡು ಹಾರಿಸಿದ್ದು ಯಾರು ? ಎಂಬ ಸತ್ಯಾಸತ್ಯತೆಯನ್ನು ಪತ್ತೆ ಹಚ್ಚುವುದನ್ನ ಮುಂದುವರೆಸಿದ್ದಾರೆ.

**ರಾಜಕೀಯ ಸಂಘರ್ಷ**

ಬಳ್ಳಾರಿಯಲ್ಲಿ ಅಧಿಕಾರಕ್ಕಾಗಿ ನಡೆಯುತ್ತಿರುವ ಈ ಹೋರಾಟ ಈಗ ಕಾನೂನು ಸುವ್ಯವಸ್ಥೆಯ ಪ್ರಶ್ನೆಯನ್ನು ಹುಟ್ಟುಹಾಕಿದೆ. ಭರತ್ ರೆಡ್ಡಿ ಅವರ ಬಿಡುಗಡೆ ಮಾಡಿರುವ ಈ ಗನ್‌ಮ್ಯಾನ್ ಫೋಟೋಗೆ ಸಂಬಂಧಿಸಿದಂತೆ ಜನಾರ್ದನ ರೆಡ್ಡಿ ಯಾವ ಪ್ರತಿಕ್ರಿಯಿಸುತ್ತಾರೆ ಎಂಬುದು ಕುತೂಹಲ ಮೂಡಿಸಿದೆ. ಸದ್ಯ ಈ ಕುರಿತು ಹೆಚ್ಚಿನ ತನಿಕೆ ನಡೆಯುತ್ತಿದ್ದು, ಅಧಿಕಾರಿಗಳ ಮುಂದೆ ಯಾವ ಕ್ರಮ ಕೈಗೊಳ್ಳುತ್ತಾರೆ ಕಾದು ನೋಡಬೇಕಿದೆ.

# ಸ್ವಯಂ ಸೀನ್ ಕ್ರಿಯೇಟ್ ಆರೋಪ; ಮಹಿಳೆ ಮೇಲೆ 9 ಕೇಸ್ ದಾಖಲೆ ಹು-ಧಾ ಆಯುಕ್ತ



**ಹುಬ್ಬಳ್ಳಿ:** ಪೊಲೀಸರು ಮಹಿಳೆಯನ್ನ ವಶಕ್ಕೆ ಪಡೆದಾಗ ಆಕೆ ವಿವಸ್ತ್ರಳಾಗಿರಲಿಲ್ಲ. ವ್ಯಾನ್ ಹತ್ತಿದ ಮೇಲೆ ತಾನೇ ಬಟ್ಟೆ ಬಿಚ್ಚಿ ಸೀನ್ ಕ್ರಿಯೇಟ್ ಮಾಡಿದ್ದಾಳೆ ಎಂದು ಹುಬ್ಬಳ್ಳಿ ಧಾರವಾಡ ಪೊಲೀಸ್ ಆಯುಕ್ತ ಶಶಿಕುಮಾರ್ ತಿಳಿಸಿದ್ದಾರೆ.

ಬಿಜೆಪಿ ಕಾರ್ಯಕರ್ತೆಯ ಬಟ್ಟೆ ಬಿಚ್ಚಿ ಥಳಿಸಿದ್ದಾರೆ ಎನ್ನಲಾದ ವಿಡಿಯೋ ವೈರಲ್ ಆದ ಬೆನ್ನಲ್ಲೇ ಪೊಲೀಸ್ ಆಯುಕ್ತರು ಪ್ರಕರಣ ಸಂಪೂರ್ಣ ವಿವರಣೆ ನೀಡಿದ್ದಾರೆ. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಹೊಸ ವರ್ಷದಲ್ಲಿ ಹೊರತುಪಡಿಸಿ 2020 ರಿಂದ ಬಂಧಿತ ಮಹಿಳೆ ಮೇಲೆ 5 ಪ್ರಕರಣ ದಾಖಲಾಗಿದ್ದವು. ಅದರಲ್ಲಿ ಧಾರವಾಡ ವಿದ್ಯಾಗಿರಿಯಲ್ಲಿ ಒಂದು ಮತ್ತು ಇದೇ ಕೇಶ್ವಾಪುರ ಠಾಣೆಯಲ್ಲಿ 4 ಕೇಸ್ ದಾಖಲಾಗಿದ್ದವು. ಈ ವರ್ಷ 4 ಪ್ರಕರಣ ಸೇರಿ ಒಟ್ಟು 9 ಪ್ರಕರಣಗಳು ದಾಖಲಾಗಿವೆ ಎಂದು ವಿವರಿಸಿದ್ದಾರೆ. ಈ ಹಿಂದಿನ ಪ್ರಕರಣಗಳಲ್ಲಿ ಮಹಿಳೆಯ ನಡವಳಿಕೆಗಳ ಬಗ್ಗೆ ಮಾಹಿತಿದ್ದ ಕೇಶ್ವಾಪುರ ಪೊಲೀಸರು ಮಹಿಳೆಯನ್ನ ಬಂಧಿಸಲು ಹೆಚ್ಚುವರಿ ಮಹಿಳಾ ಸಿಬ್ಬಂದಿ ಕರೆಸಿಕೊಂಡಿದ್ದಾರೆ. ಪೊಲೀಸರು ವಶಕ್ಕೆ ಪಡೆದು ಬಂಧಿಸುವಾಗ ಆಕೆ ಬೆತ್ತಲೆ ಆಗಿರಲಿಲ್ಲ, ವ್ಯಾನ್ ಹತ್ತಿದ ಬಳಿಕ ಬಟ್ಟೆ ಆಕೆಯೇ ಬಿಚ್ಚಿದ್ದಾಳೆ. ಮಹಿಳೆ ಹಾಗೂ ಪುರುಷ ಸಿಬ್ಬಂದಿ ಮೇಲೆ ಹಲ್ಲೆ ಮಾಡಿದ್ದಾಳೆ ಎಂದು ತಿಳಿಸಿದ್ದಾರೆ. ಮತಪಟ್ಟಿ ಪರಿಷ್ಕರಣೆಗೆ ಹೋದಾಗ ಸ್ಥಳೀಯರ ನಡುವೆ ನಡೆದ ಸಂಘರ್ಷ ದ್ವೇಷದ ರೂಪಕ್ಕೆ ಬದಲಾಗಿದೆ, ಗಲಾಟೆಯೂ ನಡೆದಿದೆ. ಸ್ಥಳಕ್ಕೆ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಸ್ಥಿತಿಯನ್ನು ತಿಳಿಗೊಳಿಸಿದ ನಂತರ ದೂರು ದಾಖಲಾಗುತ್ತಾ ಹೋಗಿವೆ.

ಇದೇ ವೇಳೆ ಸ್ಥಳೀಯರಾದ ಪ್ರಶಾಂತ್ ಬೊಬ್ಬಾಜಿ ಅವರು ನೀಡಿದ ದೂರು ಆಧರಿಸಿ ಕೇಸ್‌ನ ಪ್ರಮುಖ ಆರೋಪಿಯಾಗಿದ್ದ ಮಹಿಳೆಯನ್ನ ಬಂಧಿಸಲಾಗಿದೆ. ಮಹಿಳೆಯೊಬ್ಬರಿಗೆ ಕತ್ತು ಹಿಸುಕಲು ಹೋಗಿದ್ದು, ಖಾಸಗಿ ಅಂಗಕ್ಕೆ ಹೊಡೆದಿದ್ದು, ಸಾಕ್ಷ್ಯ ಸಿಕ್ಕದ ಮೇಲೆ ಅರೆಸ್ಟ್ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಮಹಿಳೆಯನ್ನ ವ್ಯಾನ್ ಒಳಗೆ ಹತ್ತಿಸುತ್ತಿದ್ದಂತೆ ಆಕೆಯೇ ಖುದ್ದಾಗಿ ಬಟ್ಟೆಯನ್ನ ಬಿಚ್ಚಿದ್ದಾಳೆ. ಅಲ್ಲದೇ ನಮ್ಮ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ್ದಾಳೆ. ಕಲಾವತಿ ಚಂದಾವರ್ಕರ್, ಶಕುಂತಲಾ, ರೇಖಾ ಮತ್ತು ಮಾರ್ಗರೇಟ್ ಅನ್ನುವವರಿಗೆ ಕಚ್ಚಿ ಘಾಸಿಗೊಳಿಸಿದ್ದಾಳೆ. ಓರ್ವ ಸಿಬ್ಬಂದಿಗೆ ಹೊಟ್ಟೆ ಭಾಗಕ್ಕೆ ರಕ್ತ ಬರುವಂತೆ ಕಚ್ಚಿದ್ದಾಳೆ. ಆದ್ರೆ ಈ ವಿಡಿಯೋ ಯಾರ್ ಮಾಡಿದ್ದಾರೆ ಗೊತ್ತಿಲ್ಲ. ವಿಡಿಯೋ ಮಾಡಿ ವೈರಲ್ ಮಾಡಿದವರ ವಿರುದ್ಧವೂ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ತಿಳಿಸಿದ್ದಾರೆ.

ಒಂದು ವೇಳೆ ಪೊಲೀಸರು ಮಾಡಿದ್ದರೆ, ಅರೆಸ್ಟ್ ಆದ ಮೇಲೆ ಮೆಡಿಕಲ್ ಮಾಡಿಸ್ತೀವಿ, ಆಗಲಾದ್ರೂ ವೈದ್ಯರ ಬಳಿ ಹೇಳೋಕೆ ಅವಕಾಶ ಇತ್ತು. ನಂತರ ಮ್ಯಾಜಿಸ್ಟ್ರೇಟ್ ಬಳಿಯೂ ಹೇಳಿಲ್ಲ. ಆಕೆ ಬಟ್ಟೆ ಬಿಚ್ಚಿದ್ದಾಗ ಪೊಲೀಸರೇ ಸ್ಥಳೀಯರ ಸಹಾಯದಿಂದ ಬೇರೆ ಬಟ್ಟೆ ಹಾಕಿಸಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ.

**ಪ್ರಕರಣದ ಹಿನ್ನೆಲೆ ಏನು?**

ಘಟನೆಗೆ ಹಳೇ ವೈಷಮ್ಯ ಕಾರಣ ಅಂತ ಹೇಳಲಾಗ್ತಿದೆ. ಮತದಾರರ ಪಟ್ಟಿ ಪರಿಷ್ಕರಣೆ ಸಂದರ್ಭದಲ್ಲಿ ಕೇಶ್ವಾಪುರ ಠಾಣಾ ವ್ಯಾಪ್ತಿಯಲ್ಲಿ ಗಲಾಟೆಯಾಗಿತ್ತು. ಬೂತ್ ಅಧಿಕಾರಿಗಳೊಂದಿಗೆ ತೆರಳಿದ್ದ ಬಿಜೆಪಿ ಕಾರ್ಯಕರ್ತೆ ನಮ್ಮ ವೋಟ್ ಡಿಲೀಟ್ ಮಾಡಿಸಿದ್ದಾರೆ ಅಂತ ಗಲಾಟೆ ಮಾಡಿದ್ದರು. ಹಾಗಾಗಿ ಬಿಜೆಪಿ-ಕಾಂಗ್ರೆಸ್ ಮಧ್ಯೆ ತಿಕ್ಕಾಟ ನಡೆಯುತ್ತಲೇ ಇತ್ತು. ಇದೇ ಪ್ರಕರಣ ಮುಂದಿಟ್ಟುಕೊಂಡು ಕಾಂಗ್ರೆಸ್‌ನ ನಗರ ಪಾಲಿಕೆ ಸದಸ್ಯೆ ಸುವರ್ಣ ಕಲ್ಲಕುಂಟ್ಲಾ ದೂರು ನೀಡಿದ್ದರಂತೆ. ಇದಕ್ಕೆ ಬಿಜೆಪಿ ಕಾರ್ಯಕರ್ತರಿಂದಲೂ ಪ್ರತಿದೂರು ದಾಖಲಾಗಿತ್ತು. ಸುವರ್ಣ ಕಲ್ಲಕುಂಟ್ಲಾ ನೀಡಿದ ದೂರಿನ ಮೇರೆಗೆ ಬಿಎನ್‌ಎಸ್ ಸೆಕ್ಷನ್ 307 ಅಡಿ ಪ್ರಕರಣ ದಾಖಲಿಸಿಕೊಂಡ ಪೊಲೀಸರು ಮಹಿಳೆಯನ್ನ ಬಂಧಿಸಿದ್ದಾರೆ.

# ಹೆದ್ದಾರಿ ನಿರ್ಮಾಣದಲ್ಲಿ ವಿಶ್ವ ದಾಖಲೆ ಬರೆದ ಭಾರತ



ಭಾರತದ ರಸ್ತೆ ನಿರ್ಮಾಣ ಕ್ಷೇತ್ರದಲ್ಲಿ ಮತ್ತೊಮ್ಮೆ ವಿಶ್ವ ದಾಖಲೆ ಬರೆಯಲಾಗಿದೆ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (NHAI) ಆಂಧ್ರ ಪ್ರದೇಶದಲ್ಲಿ ಬೆಂಗಳೂರು-ಕಡಪಾ-ವಿಜಯವಾಡ ಎಕನಾಮಿಕ್ ಕಾರಿಡಾರ್ (NH-544G) ನಿರ್ಮಾಣದಲ್ಲಿ ಎರಡು ವಿಶ್ವ ದಾಖಲೆಗಳನ್ನು ಸ್ಥಾಪಿಸಿದೆ.

ಈ ಐತಿಹಾಸಿಕ ಸಾಧನೆಯನ್ನು ಆಂಧ್ರ ಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅವರು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. “NHAI ಮತ್ತು ರಾಜ್‌ಪಥ್ ಇನ್‌ಫ್ರಾಕಾನ್ ಪ್ರೈವೇಟ್ ಲಿಮಿಟೆಡ್ ತಂಡದ ಅದ್ಭುತ ಕೆಲಸಕ್ಕೆ ಅಭಿನಂದನೆಗಳು. ಇದು ಭಾರತ ಸರ್ಕಾರದ ದೂರದೃಷ್ಟಿ ಮತ್ತು ಕೇಂದ್ರ ರಸ್ತೆ ಸಾರಿಗೆ ಸಚಿವ ನಿತಿನ್ ಗಡ್ಕರಿ ಅವರ ನಾಯಕತ್ವದ ಫಲ” ಎಂದು ಅವರು ಪ್ರಶಂಸಿಸಿದ್ದಾರೆ. ಈ ಕಾಮಗಾರಿ ಸತ್ಯಸಾಯಿ ಜಿಲ್ಲೆಯ ಪುಟ್ಟಪರ್ತಿಯಲ್ಲಿ ನಡೆದಿದ್ದು, NHAIಯ ಕಟ್ಟುನಿಟ್ಟಾದ ಗುಣಮಟ್ಟದ ಮಾನದಂಡಗಳನ್ನು ಪಾಲಿಸಿ ಪೂರ್ಣಗೊಳಿಸಲಾಗಿದೆ. ಈ ದಾಖಲೆಗಳು ಭಾರತದ ರಸ್ತೆ ನಿರ್ಮಾಣದ ವೇಗ ಮತ್ತು ತಾಂತ್ರಿಕ ಸಾಮರ್ಥ್ಯವನ್ನು ವಿಶ್ವಕ್ಕೆ ತೋರಿಸಿವೆ. ಹಿಂದೆಯೂ ಭಾರತ ಹಲವು ದಾಖಲೆಗಳನ್ನು ಬರೆದಿದೆ – ಉದಾಹರಣೆಗೆ, 2022ರಲ್ಲಿ ಮಹಾರಾಷ್ಟ್ರದ ಅಮರಾವತಿ-ಅಕೋಲಾ ನಡುವೆ 75 ಕಿ.ಮೀ ಸಿಂಗಲ್ ಲೇನ್ ಬಿಟುಮಿನಸ್ ರಸ್ತೆಯನ್ನು ಕೇವಲ 105 ಗಂಟೆಗಳಲ್ಲಿ ಪೂರ್ಣಗೊಳಿಸಿ ಗಿನ್ನೆಸ್ ದಾಖಲೆ ಪಡೆದಿತ್ತು.

ಈಗ ಆಂಧ್ರದಲ್ಲಿ ಸಾಧಿಸಿದ ಎರಡು ಹೊಸ ದಾಖಲೆಗಳು ಈ ಸರಣಿಯನ್ನು ಮುಂದುವರಿಸಿವೆ. ಬೆಂಗಳೂರು-ಕಡಪಾ-ವಿಜಯವಾಡ ಎಕನಾಮಿಕ್ ಕಾರಿಡಾರ್ ಆರು ಲೇನ್ ಆಕ್ಸೆಸ್ ಕಂಟ್ರೋಲ್ಡ್ ಎಕ್ಸ್‌ಪ್ರೆಸ್‌ವೇಯಾಗಿದ್ದು, ಅಮರಾವತಿ ಮತ್ತು ಬೆಂಗಳೂರು ನಡುವಿನ ಪ್ರಯಾಣ ಸಮಯವನ್ನು ಪ್ರಸ್ತುತ 11-12 ಗಂಟೆಗಳಿಂದ 6 ಗಂಟೆಗಳಿಗೆ ಇಳಿಸಲಿದೆ. ಈ ಯೋಜನೆ ಆಂಧ್ರ ಪ್ರದೇಶದ ಆರ್ಥಿಕ ಬೆಳವಣಿಗೆಗೆ ಮತ್ತು ದಕ್ಷಿಣ ಭಾರತದ ಸಂಪರ್ಕಕ್ಕೆ ದೊಡ್ಡ ಉತ್ತೇಜನ ನೀಡಲಿದೆ. ಇನ್ನು ಜನವರಿ 11ರೊಳಗೆ ಈ ಕಾರಿಡಾರ್‌ನ ಇತರ ಪ್ಯಾಕೇಜ್‌ಗಳಲ್ಲಿ ಇನ್ನಷ್ಟು ದಾಖಲೆಗಳನ್ನು ಸಾಧಿಸಲು ಯತ್ನ ನಡೆಯುತ್ತಿದೆ ಎಂದು ಸಿಎಂ ನಾಯ್ಡು ತಿಳಿಸಿದ್ದಾರೆ.

ಭಾರತದಲ್ಲಿ ರಾಷ್ಟ್ರೀಯ ಹೆದ್ದಾರಿಗಳ ಉದ್ದ 2014ರ 91,287 ಕಿ.ಮೀನಿಂದ 2024ಕ್ಕೆ 1,46,195 ಕಿ.ಮೀಗೆ ಏರಿಕೆಯಾಗಿದೆ. ಇದು ವಿಶ್ವದಲ್ಲಿ ಎರಡನೇ ಅತಿದೊಡ್ಡ ರಸ್ತೆ ಜಾಲವಾಗಿದೆ. ಭರತಮಾಲ ಪರಿಯೋಜನೆಯಡಿ ಹಲವು ಎಕ್ಸ್‌ಪ್ರೆಸ್‌ವೇಗಳು ಮತ್ತು ಹೈವೇಗಳ ನಿರ್ಮಾಣ ವೇಗಗೊಂಡಿದೆ. NHAIಯ ಈ ಸಾಧನೆಗಳು ದೇಶದ ಮೂಲಸೌಕರ್ಯ ಅಭಿವೃದ್ಧಿಯಲ್ಲಿ ಹೊಸ ಅಧ್ಯಾಯ ಬರೆಯುತ್ತಿವೆ. ಈ ದಾಖಲೆಗಳು ಭಾರತದ ಇಂಜಿನಿಯರ್‌ಗಳು, ಕಾರ್ಮಿಕರು ಮತ್ತು ತಂಡದ ಶ್ರಮಕ್ಕೆ ಗೌರವ ಸಲ್ಲಿಸುತ್ತವೆ. ಭವಿಷ್ಯದಲ್ಲಿ ಇನ್ನಷ್ಟು ಯೋಜನೆಗಳು ಇಂತಹ ಸಾಧನೆಗಳನ್ನು ಮಾಡಲಿವೆ ಎಂಬ ನಿರೀಕ್ಷೆ ಇದೆ.

# ಪ್ರಧಾನಿ ಮೋದಿಯನ್ನೂ ಟ್ರಂಪ್ ಕಿಡ್ನಾಪ್ ಮಾಡ್ತಾರಾ ಪೃಥ್ವಿರಾಜ್ ಚೌಹಾಣ್ ಶಾಕಿಂಗ್ ಹೇಳಿಕೆ



**ಮುಂಬೈ:** ವೆನಿಜುವೆಲಾದ ಅಧ್ಯಕ್ಷ ನಿಕೋಲಸ್ ಮಡುರೋ ಅವರನ್ನು ಅಮೆರಿಕದ ಪಡೆಗಳು ಬಂಧಿಸಿ ನ್ಯೂಯಾರ್ಕ್‌ಗೆ ಕರೆದೊಯ್ದ ಬೆನ್ನಲ್ಲೇ, ಮಹಾರಾಷ್ಟ್ರದ ಮಾಜಿ ಸಿಎಂ ಹಾಗೂ ಕಾಂಗ್ರೆಸ್ ಹಿರಿಯ ನಾಯಕ ಪೃಥ್ವಿರಾಜ್ ಚೌಹಾಣ್ ನೀಡಿರುವ ಹೇಳಿಕೆ ದೇಶಾದ್ಯಂತ ದೊಡ್ಡ ಸಂಚಲನ ಮೂಡಿಸಿದೆ. ಟ್ರಂಪ್ ಅವರು ಮಡುರೋ ಅವರನ್ನು ಕಿಡ್ನಾಪ್ ಮಾಡಿದಂತೆ ಪ್ರಧಾನಿ ಮೋದಿಯನ್ನೂ ಕಿಡ್ನಾಪ್ ಮಾಡಬಹುದೇ ? ಎಂದು ಪ್ರಶ್ನಿಸುವ ಮೂಲಕ ಅವರು ಬಿಜೆಪಿಯ ಕೆಂಗಣ್ಣಿಗೆ ಗುರಿಯಾಗಿದ್ದಾರೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಭಾರತದ ಉತ್ಪನ್ನಗಳ ಮೇಲೆ ಶೇ. 50 ರಷ್ಟು ಸುಂಕ ವಿಧಿಸಿರುವ ಬಗ್ಗೆ ಮಾತನಾಡುತ್ತಿದ್ದ ಚೌಹಾಣ್, ಅಮೆರಿಕದ ಇಂತಹ ಕಠಿಣ ಧೋರಣೆಗಳು ಭಾರತದ ವ್ಯಾಪಾರದ ಮೇಲೆ ಮಾರಕ ಪೆಟ್ಟು ನೀಡಲಿವೆ ಎಂದರು. ಇದೇ ವೇಳೆ ವೆನಿಜುವೆಲಾದಲ್ಲಿ ಅಮೆರಿಕ ನಡೆಸಿದ ಮಿಲಿಟರಿ ಕಾರ್ಯಾಚರಣೆಯನ್ನು ಪ್ರಸ್ತಾಪಿಸಿದ ಅವರು, ಮುಂದಿನ ದಿನಗಳಲ್ಲಿ ಭಾರತದಲ್ಲೂ ವೆನಿಜುವೆಲಾದಂತಹ ಸ್ಥಿತಿ ಬರಬಹುದೇ ? ಟ್ರಂಪ್ ನಮ್ಮ ಪ್ರಧಾನಿಯನ್ನೂ ಅಪಹರಿಸಬಹುದೇ ? ಎಂಬ ಆಘಾತಕಾರಿ ಪ್ರಶ್ನೆಯನ್ನು ಕೇಳಿದ್ದಾರೆ. ಚೌಹಾಣ್ ಅವರ ಈ ಹೇಳಿಕೆಯನ್ನು ಬಿಜೆಪಿ ಕಾರ್ಯಕರ್ತರು ತೀವ್ರವಾಗಿ ಖಂಡಿಸಿದೆ. ಇದು ಕೇವಲ ಪ್ರಧಾನಿ ಮೋದಿಯವರಿಗೆ ಮಾಡಿದ ಅಪಮಾನವಲ್ಲ, ಇಡೀ ದೇಶದ ಸಾರ್ವಭೌಮತೆಗೆ ಮಾಡಿದ ಅವಮಾನ ಎಂದು ಬಿಜೆಪಿ ನಾಯಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಾಂಗ್ರೆಸ್ ನಾಯಕರ ಮೆದುಳು ಸತ್ತುಹೋಗಿದೆ, ಇವರು ಅಜ್ಞಾನಿಗಳು ಎಂದು ಸಾಮಾಜಿಕ ಜಾಲತಾಣಗಳಲ್ಲಿ ಬಿಜೆಪಿ ಬೆಂಬಲಿಗರು ಲೇವಡಿ ಮಾಡುತ್ತಿದ್ದಾರೆ. ಭಾರತವು ಪರಮಾಣು ಶಕ್ತಿ ಹೊಂದಿರುವ ಪ್ರಬಲ ಪ್ರಜಾಪ್ರಭುತ್ವ ರಾಷ್ಟ್ರವಾಗಿದ್ದು, ವೆನಿಜುವೆಲಾದಂತಹ ದೇಶಕ್ಕೆ ಹೋಲಿಸುವುದು ಮೂರ್ಖತನ ಎಂದು ಪೃಥ್ವಿರಾಜ್ ಚೌಹಾಣ್‌ಗೆ ರುಗೇಟು ನೀಡಿದ್ದಾರೆ.

**ವೆನಿಜುವೆಲಾದಲ್ಲಿ ಏನಾಗುತ್ತಿದೆ ?**

ಮತ್ತೊಂದೆಡೆ, ಅಮೆರಿಕದ ವಶದಲ್ಲಿರುವ ನಿಕೋಲಸ್ ಮಡುರೋ ಅವರು ನ್ಯೂಯಾರ್ಕ್ ನ್ಯಾಯಾಲಯದಲ್ಲಿ ತಮ್ಮ ಮೇಲಿನ ಮಾದಕ ವಸ್ತು ಕಳ್ಳಸಾಗಣೆ ಆರೋಪಗಳನ್ನು ನಿರಾಕರಿಸಿದ್ದಾರೆ. ನನ್ನನ್ನು ನನ್ನ ದೇಶದಲ್ಲೇ ಅಪಹರಿಸಲಾಗಿದೆ, ನಾನು ಈಗಲೂ ವೆನಿಜುವೆಲಾದ ಅಧ್ಯಕ್ಷ ಎಂದು ಮಡುರೋ ಹೇಳಿದ್ದಾರೆ. ಅವರ ಪತ್ನಿ ಸಿಲಿಯಾ ಫ್ಲೋರ್ಸ್ ಕೂಡ ತಾನು ನಿರಪರಾಧಿ ಎಂದು ಹೇಳಿಕೊಂಡಿದ್ದಾರೆ. ಈ ಪ್ರಕರಣದ ಮುಂದಿನ ವಿಚಾರಣೆ ಮಾರ್ಚ್ 17ಕ್ಕೆ ನಿಗದಿಯಾಗಿದ್ದು, ಈ ಪ್ರಕರಣದ ಅಂತಿಮ ತೀರ್ಪೇನು ಎಂದು ಕಾದು ನೋಡಬೇಕಿದೆ.

# ದೇವರಾಜ ಅರಸು ಅವರಿಗೆ ಸಿದ್ದರಾಮಯ್ಯ ಸಾಟಿಯೇ ಇಲ್ಲ ಯಾವ ಅಹಿಂದ ನಾಯಕ ರೀ ಹೆಚ್. ವಿಶ್ವನಾಥ್ ತಿರುಗೇಟು



**ಬೆಂಗಳೂರು:** ಸಿದ್ದರಾಮಯ್ಯ ದೇವರಾಜ ಅರಸು) ದಾಖಲೆ ಮುರಿದೆ ಎನ್ನುತ್ತಿದ್ದಾರೆ. ಇಟ್ ಇಸ್ ಜೋಕ್ ಆಫ್ ದ ಇಯರ್ 2026 ಎಂದು ಪರಿಷತ್ ಸದಸ್ಯ ಹೆಚ್. ವಿಶ್ವನಾಥ್ ವ್ಯಂಗ್ಯವಾಡಿದ್ದಾರೆ.

ಸದಾಶಿವನಗರದಲ್ಲಿ ಡಿಸಿಎಂ ಡಿಕೆಶಿ ಭೇಟಿ ಮಾಡಿ ಬಳಿಕ ಮಾತನಾಡಿದ ಅವರು, ನಮ್ಮನ್ನೆಲ್ಲ ದೇವರಾಜ ಅರಸು ಅವರು ಬೆಳೆಸಿದ್ದು. ಬಹುಶಃ ದೇವರಾಜ ಅರಸು ಅವರನ್ನ ಮತ್ತು ಇಂದಿರಾಗಾಂಧಿ ಅವರನ್ನ ಸಿದ್ದರಾಮಯ್ಯನವರಷ್ಟು ಬೈದವರು ಯಾರಿಲ್ಲ. ಆದರೆ ಈಗ ದೇವರಾಜ ಅರಸು ಅವರ ಬಗ್ಗೆ ಮಾತನಾಡುತ್ತಾರೆ ಎಂದು ಟೀಕಿಸಿದರು.

ಅರಸು ಅವರು ಹಾವನೂರು ವರದಿ ತಗೊಂಡು ಬಂದರು. ಹಿಂದುಳಿದ ವರ್ಗದ ಅಧಿಕಾರಿ ಇದ್ದಾರೆ ಅಂದರೆ ಅದಕ್ಕೆ ಕಾರಣ ಅರಸು. ರಾಹುಲ್ ಗಾಂಧಿ ಹೇಳಿದ್ರು ಅನ್ನೋ ಕಾರಣಕ್ಕೆ ವರದಿ ಬಿಸಾಕಿದ್ರಿ. ಕಾಂಗ್ರೆಸ್ ಬಗ್ಗೆ ಸಿದ್ದರಾಮಯ್ಯ ಮಾತನಾಡುತ್ತಲೇ ಇಲ್ವಲ್ಲಾ? ಬರೀ ಅಹಿಂದ ಅಹಿಂದ, ಅಹಿಂದವೇ ಕಾಂಗ್ರೆಸ್ ಎಂದು ತಿರುಗೇಟು ಕೊಟ್ಟರು. ರಾಜ್ಯದಲ್ಲಿ ಶಾಂತಿ, ಸುಭಿಕ್ಷೆ ಇಲ್ಲ. ದೇವರಾಜ ಅರಸು ಅವರಿಗೆ ಸಾಟಿ ಇಲ್ಲ. ಅರಸು ಸಮಾನ ಎನ್ನುವುದು ನಗೆಪಾಟಲು. ಇವರು ಯಾವ ಅಹಿಂದ ನಾಯಕ ರೀ? ಸಿದ್ದರಾಮಯ್ಯಗೆ ಕೃತಜ್ಞತೆ ಇಲ್ಲ. ಯುವ ನಾಯಕತ್ವವನ್ನ ಬೆಳೆಸೋದಿಲ್ಲ. ಹೈಕಮಾಂಡ್ ಸುತ್ತಿಗೆ ಹಿಡಿದುಕೊಂಡು ಕೂತಿದೆ. ಯಾವಾಗ ಹೊಡೆಯುತ್ತೋ ಗೊತ್ತಿಲ್ಲ ಎಂದು ಟಾಂಗ್ ಕೊಟ್ಟರು

# ಇತಿಹಾಸದಲ್ಲೇ ಮೊದಲ ಬಾರಿಗೆ ಭಾನುವಾರದಂದು ಕೇಂದ್ರ ಬಜೆಟ್ ಮಂಡನೆ



**ಹೊಸದಿಲ್ಲಿ:** ಭಾರತದ ಆರ್ಥಿಕ ಇತಿಹಾಸದಲ್ಲಿ ಈ ಬಾರಿ ಒಂದು ವಿಶೇಷ ಘಟನೆಗೆ ಸಾಕ್ಷಿಯಾಗುತ್ತಿದ್ದೇವೆ. 2026-27ನೇ ಹಣಕಾಸು ವರ್ಷದ ಕೇಂದ್ರ ಬಜೆಟ್ ಫೆಬ್ರವರಿ 1ರ ರವಿವಾರದಂದು ಮಂಡನೆಯಾಗುವ ಸಾಧ್ಯತೆ ದಟ್ಟವಾಗಿದೆ. ಬಜೆಟ್ ಮಂಡನೆಯ ಸಂಪ್ರದಾಯದಲ್ಲಿ ಇದೊಂದು ಅಪರೂಪದ ವಿದ್ಯಮಾನವಾಗಿದ್ದು, ಇಡೀ ದೇಶದ ಕುತೂಹಲ ಹೆಚ್ಚಿಸಿದೆ.

ರವಿವಾರದ ಸಂಪ್ರದಾಯ ಮತ್ತು ಸವಾಲು: ಸಾಮಾನ್ಯವಾಗಿ ರವಿವಾರ ಸರ್ಕಾರಿ ರಜೆ ಹಾಗೂ ಷೇರು ಮಾರುಕಟ್ಟೆಗಳು ಮುಚ್ಚಿರುತ್ತವೆ. ಅಲ್ಲದೆ, ಈ ಬಾರಿ ಫೆಬ್ರವರಿ 1ರಂದು 'ಗುರು ರವಿದಾಸ್ ಜಯಂತಿ' ಕೂಡ ಇದ್ದು, ಇದು ನಿರ್ಬಂಧಿತ ರಜಾದಿನವಾಗಿದೆ. ಆದರೂ, ಮೋದಿ ಸರ್ಕಾರವು 2017ರಲ್ಲಿ ಮಾಜಿ ವಿತ್ತ ಸಚಿವ ಅರುಣ್ ಜೇಟ್ಲಿ ಅವರು ಆರಂಭಿಸಿದ ಫೆಬ್ರವರಿ 1ರಂದು ಬಜೆಟ್ ಮಂಡಿಸುವ ಸಂಪ್ರದಾಯವನ್ನು ಮುಂದುವರಿಸಲು ನಿರ್ಧರಿಸಿದೆ. ಸಂಸದೀಯ ವ್ಯವಹಾರಗಳ ಕುರಿತ ಸಂಪುಟ ಸಮಿತಿ (CCPA) ಈ ಕುರಿತು ಅಂತಿಮ ನಿರ್ಧಾರವನ್ನು ಶೀಘ್ರದಲ್ಲೇ ಪ್ರಕಟಿಸಲಿದೆ.

**ಅಧಿವೇಶನದ ವೇಳಾಪಟ್ಟಿ ಹೀಗಿದೆ:**

ಬಜೆಟ್ ಅಧಿವೇಶನವು ಜನವರಿ 28ರಂದು ರಾಷ್ಟ್ರಪತಿಗಳ ಭಾಷಣದೊಂದಿಗೆ ಅದ್ಧೂರಿಯಾಗಿ ಆರಂಭವಾಗಲಿದೆ. ಜಾರಿಯಲ್ಲಿರುವ ಮಾಹಿತಿಯಂತೆ, ಜನವರಿ 29ರಂದು ದೇಶದ ಆರ್ಥಿಕ ಸ್ಥಿತಿಗತಿಯನ್ನು ಬಿಂಬಿಸುವ ಆರ್ಥಿಕ ಸಮೀಕ್ಷೆಯನ್ನು ಮಂಡಿಸಲಾಗುತ್ತದೆ. ಜನವರಿ 30 ಮತ್ತು 31ರಂದು ರಜಾದಿನಗಳಾಗಿದ್ದು, ನಂತರ ಫೆಬ್ರವರಿ 1ರಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ತಮ್ಮ ಸತತ 9ನೇ ಬಜೆಟ್ ಮಂಡಿಸಲಿದ್ದಾರೆ. ಬಜೆಟ್ ಇತಿಹಾಸದ ಬದಲಾವಣೆಗಳು:

2017ಕ್ಕೆ ಮುನ್ನ ಬಜೆಟ್ ಅನ್ನು ಫೆಬ್ರವರಿ ತಿಂಗಳ ಕೊನೆಯ ದಿನದಂದು ಮಂಡಿಸಲಾಗುತ್ತಿತ್ತು. ಬ್ರಿಟಿಷ್ ಕಾಲದ ಈ ಪದ್ಧತಿಯನ್ನು ಬದಲಿಸಿ ಫೆಬ್ರವರಿ 1ಕ್ಕೆ ನಿಗದಿಪಡಿಸಲಾಯಿತು. ಇದರಿಂದಾಗಿ ಏಪ್ರಿಲ್ 1ರ ಹೊಸ ಹಣಕಾಸು ವರ್ಷ ಆರಂಭಕ್ಕೂ ಮುನ್ನವೇ ಬಜೆಟ್ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಸರ್ಕಾರಕ್ಕೆ ಅನುಕೂಲವಾಗುತ್ತಿದೆ. ಬ್ರಿಟಿಷ್ ಕಾಲದ ಮತ್ತೊಂದು ಸಂಪ್ರದಾಯವಾದ 'ಸಂಜೆ 5 ಗಂಟೆಯ ಬಜೆಟ್' ಅನ್ನು 1999ರಲ್ಲಿ ಯಶವಂತ್ ಸಿನ್ಹಾ ಅವರು ಬೆಳಿಗ್ಗೆ 11 ಗಂಟೆಗೆ ಬದಲಾಯಿಸಿದ್ದರು.

ಬಜೆಟ್ ರವಿವಾರ ಮಂಡನೆಯಾಗುತ್ತಿರುವುದರಿಂದ, ಷೇರು ಮಾರುಕಟ್ಟೆಗಳು (NSE & BSE) ಅಂದು ವಿಶೇಷ ವಹಿವಾಟು ನಡೆಸುತ್ತವೆಯೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. 2020ರಲ್ಲೂ ಬಜೆಟ್ ಶನಿವಾರ ಮಂಡನೆಯಾದಾಗ ಮಾರುಕಟ್ಟೆ ಕಾರ್ಯನಿರ್ವಹಿಸಿತ್ತು. ಆದ್ದರಿಂದ ಈ ಬಾರಿಯೂ ವಿಶೇಷವಾಗಿ ಏನಾದರೂ ನಡೆಯುವ ಸಾಧ್ಯತೆ ಇದೆ. ಮೊದಲ ಹಂತದ ಅಧಿವೇಶನ ಮೂರು ವಾರ ನಡೆಯಲಿದ್ದು, ಸಣ್ಣ ವಿರಾಮದ ನಂತರ ಎರಡನೇ ಭಾಗ ನಾಲ್ಕು ವಾರಗಳ ಕಾಲ ಮುಂದುವರಿಯಲಿದೆ.

# ಬಿಜೆಪಿ ಶಾಸಕ ಸಿ.ಕೆ.ರಾಮಮೂರ್ತಿರಿಂದ ಯುವತಿಗೆ ಮೆಸೇಜ್ ಮೊಬೈಲ್ ಹ್ಯಾಕ್ ಆಗಿದೆ ಎಂದು ಸ್ಪಷ್ಟನೆ

**ಜಯನಗರ:** ಕ್ಷೇತ್ರದ ಬಿಜೆಪಿ ಶಾಸಕ ಸಿ.ಕೆ. ರಾಮಮೂರ್ತಿ ಅವರ ಇನ್‌ಸ್ಟಾಗ್ರಾಂ ಖಾತೆಯಿಂದ ಯುವತಿಯೊಬ್ಬರಿಗೆ ಅನುಚಿತ ಸಂದೇಶಗಳು ಬಂದಿರುವ ಆರೋಪ ಕೇಳಿಬಂದಿದೆ. ಅನುಷ್ಕಾ ನಾಗಮೋಹನ್ ಎಂಬ ಯುವತಿ ಈ ಸಂದೇಶಗಳ ಸ್ಕ್ರೀನ್‌ಶಾಟ್‌ಗಳನ್ನು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಆದರೆ ಶಾಸಕ ರಾಮಮೂರ್ತಿ ಅವರು ತಮ್ಮ ಮೊಬೈಲ್ ಮತ್ತು ಸಾಮಾಜಿಕ ಜಾಲತಾಣ ಖಾತೆ ಹ್ಯಾಕ್ ಆಗಿದೆ ಎಂದು ಸ್ಪಷ್ಟನೆ ನೀಡಿದ್ದಾರೆ.

ಅನುಷ್ಕಾ ನಾಗಮೋಹನ್ ಅವರಿಗೆ ಶಾಸಕರ ಇನ್‌ಸ್ಟಾಗ್ರಾಂ ಖಾತೆಯಿಂದ “ಗುಡ್ ಮಾರ್ನಿಂಗ್”, “ಗುಡ್ ಇವನಿಂಗ್” ಸೇರಿದಂತೆ ಹಲವು ಸಂದೇಶಗಳು ಬಂದಿವೆ ಎಂದು ಆರೋಪಿಸಲಾಗಿದೆ. ಈ ಸಂದೇಶಗಳಲ್ಲಿ ಕೆಲವು ಅಶ್ಲೀಲ ಅಂಶಗಳೂ ಇದ್ದವು ಎಂಬ ಆರೋಪವಿದೆ. ಆಕ್ರೋಶಗೊಂಡ ಅನುಷ್ಕಾ ಅವರು ಈ ಸಂದೇಶಗಳ ಸ್ಕ್ರೀನ್‌ಶಾಟ್‌ಗಳನ್ನು ಎಕ್ಸ್ (ಟ್ವಿಟರ್)ನಲ್ಲಿ ಪೋಸ್ಟ್ ಮಾಡಿ, ಶಾಸಕರ ವಿರುದ್ಧ ಕಿಡಿ ಕಾರಿದ್ದಾರೆ. ಈ ಪೋಸ್ಟ್ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿ ಚರ್ಚೆಗೆ ಗ್ರಾಸವಾಗಿದೆ. ಈ ಆರೋಪಕ್ಕೆ ತಕ್ಷಣ ಸ್ಪಂದಿಸಿದ ಶಾಸಕ ಸಿ.ಕೆ. ರಾಮಮೂರ್ತಿ ಅವರು, “ನಾನು ಯಾವುದೇ ಅನುಚಿತ ಸಂದೇಶ ಕಳುಹಿಸಿಲ್ಲ. ನನ್ನ ಮೊಬೈಲ್ ಫೋನ್ ಮತ್ತು ಇನ್‌ಸ್ಟಾಗ್ರಾಂ ಖಾತೆ ಹ್ಯಾಕ್ ಆಗಿದೆ. ಇದು ದುರುದ್ದೇಶಪೂರಿತ ಷಡ್ಯಂತ್ರ” ಎಂದು ಹೇಳಿಕೊಂಡಿದ್ದಾರೆ. ಹ್ಯಾಕಿಂಗ್ ವಿರುದ್ಧ ಬೆಂಗಳೂರಿನ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸುವ ನಿರ್ಧಾರ ತೆಗೆದುಕೊಂಡಿದ್ದೇನೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಈ ಘಟನೆಯು ರಾಜಕೀಯ ವಲಯದಲ್ಲಿ ಸಂಚಲನ ಮೂಡಿಸಿದ್ದು, ಬಿಜೆಪಿ ನಾಯಕರೊಬ್ಬರ ಹೆಸರು ಅನುಚಿತ ಸಂದೇಶಗಳೊಂದಿಗೆ ಜೋಡಿಸಲ್ಪಟ್ಟಿರುವುದು ಪಕ್ಷಕ್ಕೆ ಮುಜುಗರ ಉಂಟುಮಾಡಿದೆ. ಅನುಷ್ಕಾ ನಾಗಮೋಹನ್ ಅವರು ಈ ಸಂದೇಶಗಳ ಬಗ್ಗೆ ಪೊಲೀಸರಿಗೆ ದೂರು ನೀಡುವ ಬಗ್ಗೆಯೂ ಚರ್ಚೆ ನಡೆಯುತ್ತಿದೆ. ಸಾಮಾಜಿಕ ಜಾಲತಾಣದಲ್ಲಿ ಕೆಲವರು ಶಾಸಕರ ಸ್ಪಷ್ಟನೆಯನ್ನು ಸ್ವೀಕರಿಸಿದ್ದರೆ, ಇನ್ನು ಕೆಲವರು ಹೆಚ್ಚಿನ ತನಿಕೆಯನ್ನು ಒತ್ತಾಯಿಸುತ್ತಿದ್ದಾರೆ. ಇತ್ತೀಚಿನ ದಿನಗಳಲ್ಲಿ ರಾಜಕಾರಣಿಗಳು, ಸೆಲೆಬ್ರಿಟಿಗಳ ಸಾಮಾಜಿಕ ಜಾಲತಾಣ ಖಾತೆಗಳು ಹ್ಯಾಕ್ ಆಗುವ ಘಟನೆಗಳು ಹೆಚ್ಚುತ್ತಿವೆ. ಹ್ಯಾಕರ್‌ಗಳು ಖಾತೆಗಳನ್ನು ನಿಯಂತ್ರಿಸಿ ಅನುಚಿತ ಸಂದೇಶಗಳನ್ನು ಕಳುಹಿಸಿ ವ್ಯಕ್ತಿಗಳ ಖ್ಯಾತಿಗೆ ಧಕ್ಕೆ ತರುವ ಪ್ರಕರಣಗಳು ಹಲವು ಬಾರಿ ನಡೆದಿವೆ. ಈ ಘಟನೆಯೂ ಅಂತಹದ್ದೇ ಆಗಿರಬಹುದು ಎಂಬ ಅಭಿಪ್ರಾಯ ವ್ಯಕ್ತವಾಗುತ್ತಿದೆ. ಶಾಸಕ ರಾಮಮೂರ್ತಿ ಅವರು ಜಯನಗರ ಕ್ಷೇತ್ರದಲ್ಲಿ ಸಕ್ರಿಯ ರಾಜಕಾರಣಿಯಾಗಿದ್ದು, ಬಿಜೆಪಿ ಪಕ್ಷದಲ್ಲಿ ಪ್ರಮುಖ ಸ್ಥಾನದಲ್ಲಿದ್ದಾರೆ. ಸೈಬರ್ ಪೊಲೀಸರು ದೂರು ದಾಖಲಿಸಿಕೊಂಡು ತನಿಕೆ ಆರಂಭಿಸಿದರೆ ಸತ್ಯಾಂಶಗಳು ಬಯಲಾಗಲಿವೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.